ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 28 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 10–08–2024 ಶನಿವಾರ ಪುಟ: 4 ಬೆಲೆ : ರೂ.2–00
Volume - 02 Issue - 28 Title- Code: KARKAN 28269 Chitradurga Date: 10-08-2024 Saturday Page: 4 Price: Rs. 2-00

ಒಳಪುಟದ ಸುದ್ದಿಗಳು
ಮೈಸೂರು ಚಲೋ: ವಿಜಯೇಂದ್ರ ಜೊತೆ ಹೆಜ್ಜೆ ಹಾಕಿದ ಎಂ.ಸಿ.ರಘುಚಂದನ್ 2
ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕಾಡುಗೊಲ್ಲರಭಿವೃದ್ಧಿ ಸಂಘ ಪ್ರತಿಭಟನೆ 3
ಗ್ರಾಹಕರಿಗೆ ಉತ್ತಮ ಸೇವೆ: ನಮ್ಮ ಜವಾಬ್ದಾರಿ 4
ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

ಕಾರ್ಪೋರೇಟ್ ಕಂಪನಿಗಳೇ ದೇಶ ಬಿಟ್ಟು ತೊಲಗಿ: ರೈತ ಸಂಘ ಆಗ್ರಹ

» ಚಿತ್ರದುರ್ಗ

"ಬ್ರಿಟೀಷರೇ ಭಾರತ ಬಿಟ್ಟು ತೊಲಗಿ" ಕರೆ ನೀಡಿದ ಆ. 9ರ ದಿನದಂದು" "ಕಾರ್ಪೋರೇಟ್ ಕಂಪನಿಗಳೇ ದೇಶ ಬಿಟ್ಟು ತೊಲಗಿ" ಪ್ರತಿರೋಧ ಕಂಪನಿ ಭೂತಗಳ ದಹನ ಕಾರ್ಯಕ್ರಮವನ್ನು ಸಂಯುಕ್ತ ಹೋರಾಟ–ಕರ್ನಾಟಕ ಕರೆಯ ಮೇರೆಗೆ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ನಡೆಸಲಾಯಿತು.

ನಗರದ ಪ್ರವಾಸಿ ಮಂದಿರದಿಂದ ಜಿಲ್ಲಾಧಿಕಾರಿಗಳ ಕಚೇರಿಯ ವರೆಗೆ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿದ ಪದಾಧಿಕಾರಿಗಳು, ದಾರಿಯುದ್ದಕ್ಕೂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಈಚಘಟ್ಟದ ಸಿದ್ದವೀರಪ್ಪ, ಅಭಿವೃದ್ಧಿಯ ಹೆಸರಿನಲ್ಲಿ ರೈತರ ಲಕ್ಷಾಂತರ ಎಕರೆ ಭೂಮಿಗಳನ್ನು ವಶಪಡಿಸಿಕೊಂಡು ಕಂಪನಿಗಳಿಗೆ ನೀಡಲಾಗಿದೆ. ಖಾಸಗೀಕರಣದ ಹೆಸರಿನಲ್ಲಿ ನೂರಾರು ಸಾರ್ವಜನಿಕ ಉದ್ದಿಮೆಗಳನ್ನು ದುಗ್ಗಾಣಿ ಬೆಲೆಗೆ ಕಂಪನಿಗಳಿಗೆ ನೀಡಲಾಗಿದೆ. ಮಾಲ್‌ಗಳ ಮೂಲಕ ಚಿಲ್ಲರೆ ವ್ಯಾಪಾರಕ್ಕೂ ಕಂಪನಿಗಳಿಗೆ ಕಾಲಿಡಲು ಅವಕಾಶ ಕೊಟ್ಟು ಸಣ್ಣ ವ್ಯಾಪಾರಸ್ಥರನ್ನು ಮುಳುಗಿಸಲಾಗುತ್ತಿದೆ. ಭೂ ಕಾಯ್ದೆ ತಿದ್ದುಪಡಿ ಮೂಲಕ ರೈತರ ಭೂಮಿಯನ್ನು ಬಾಚಲು ಹೊರಟಿದ್ದಾರೆ. ಎ.ಪಿ.ಎಂ.ಸಿ ಕಾಯ್ದೆಗೆ ತಿದ್ದುಪಡಿ ತರುವ ಮೂಲಕ ರೈತರ ಬೆಳೆಯ ಮೇಲೆ ಸಂಪೂರ್ಣ ಹಿಡಿತ ಸಾಧಿಸಲು ಹೊರಟಿದ್ದಾರೆ. ಕಂಪನಿಗಳ ಮೇಲಿನ ತೆರಿಗೆ ದರವನ್ನು ಇಳಿಸಲಾಗುತ್ತಿದೆ. ಜಿ.ಎಸ್.ಟಿ – ಸೆಸ್ ರೂಪಗಳಲ್ಲಿ ಜನಸಾಮಾನ್ಯರನ್ನು ಸುಲಿಯಲಾಗುತ್ತಿದೆ ಎಂದು ದೂರಿದರು.

ರೈತ ಮುಖಂಡ ಭೂತಯ್ಯ ಮಾತನಾಡಿ, ಜನಸಾಮಾನ್ಯರ ಬದುಕು ಕುಸಿಯುತ್ತಿದೆ. ಆದರೆ ಬಂಡವಾಳಿಗರ ಆದಾಯ, ಆಸ್ತಿ ವ್ಯವಹಾರ ಏರುತ್ತಿದೆ. ದೇಶದ ಮೂರನೇ ಒಂದು ಭಾಗದಷ್ಟು ಆಸ್ತಿ ದೇಶದ ಕೇವಲ 1% ಜನರ ಕೈಗಳಲ್ಲಿದೆ. ಈ ಅವಧಿಯಲ್ಲಿ ಬಹು ಕೋಟ್ಯಾಧೀಶರ ಸಂಖ್ಯೆ 56 ರಿಂದ 169ಕ್ಕೆ ಏರಿದೆ. ಮೋದಿ ಅವರ ಪರಮಾಪ್ತರಾದ ಆದಾನಿ ಹಾಗೂ ಅಂಬಾನಿ ಇಂದು ಜಗತ್ತಿನ ಅತಿ ಶ್ರೀಮಂತರ ಪಟ್ಟಿಯಲ್ಲಿ ಅಗ್ರಸ್ಥಾನಗಳಲ್ಲಿದ್ದಾರೆ. ಆದಾನಿ ಆಸ್ತಿ 2013ರಲ್ಲಿ 25,792ರೂ. ಕೋಟಿ ಇದ್ದದ್ದು 2022ರ ಹೊತ್ತಿಗೆ 7,48,800ರೂ. ಕೋಟಿ ಆಯಿತು.ಅಂದರೆಈಅವಧಿಯಲ್ಲಿ30ಪಟ್ಟು ಹೆಚ್ಚಾಗಿದೆ. ಅಂಬಾನಿ ಆಸ್ತಿ 2014ರಲ್ಲಿ 1,54,742ರೂ. ಕೋಟಿ ಇದ್ದದ್ದು 2022ರ ಹೊತ್ತಿಗೆ 7.54.620ರೂ. ಕೋಟಿ ಆಗಿದೆ. ಅಂದರೆ 5 ಪಟ್ಟು ಹೆಚ್ಚಾಗಿದೆ. ಅಭಿವೃದ್ಧಿಯ ಮುಖವಾಡದಲ್ಲಿ ನಡೆಯುತ್ತಿರುವ ದೇಶದ ಕೊಳ್ಳೆಯನ್ನು,ಜನಸಾಮಾನ್ಯರ ಸುಲಿಗೆಯನ್ನು ನಾವು ಪ್ರತಿರೋಧಿಸಬೇಕಿದೆ. ಕಂಪನಿಗಳಕೈಗೊಂಬೆಗಳಾಗಿರುವ, ಅವುಗಳ ಕಮಿಷನ್ ಏಜೆಂಟ್ ಗಳಾಗಿರುವ ಸರ್ಕಾರಗಳನ್ನು ಎಚ್ಚರಿಸಬೇಕಿದೆ. ಪಾಠ ಕಲಿಸಬೇಕಿದೆ. ಈ ವಾಸ್ತವವನ್ನು ಜನಸಾಮಾನ್ಯರ ಗಮನಕ್ಕೆ ತರಲು ಪ್ರತಿರೋಧ ಕಾರ್ಯಕ್ರಮವನ್ನು ನಡೆಸುತ್ತಿದ್ದೇವೆ ಎಂದರು.

ಕೃಷಿಯ ಮೇಲಿನ ಕಾರ್ಪೋರೇಟ್ ಆಕ್ರಮಣ ನಿಲ್ಲಲಿ, ರೈತರ ಬೆಳೆಗಳಿಗೆ ಎಂ.ಎಸ್.ಪಿ ಖಾತ್ರಿಯಾಗಲಿ, ರೈತರ ಹಾಗೂ ಜನಸಾಮಾನ್ಯರ ಬದುಕಿಗೆ ಕಂಟಕವಾಗಿರುವ ವಿದ್ಯುತ್ ಖಾಸಗೀಕರಣ ರಾಗಬೇಕು. ಕಂಪನಿಗಳ ಹಿತಕಾಯಲು ತಂದಿರುವ ಕಾರ್ಮಿಕ ವಿರೋಧಿ ನಾಲ್ಕು ಕೋಡ್‌ಗಳು ರದ್ದಾಗಬೇಕು ಉದ್ಯೋಗ ಭದ್ರತೆ ದೇಶದ ನೀತಿಯಾಗಬೇಕು. ಹಿತ್ತಲ ಬಾಗಿಲಿನಿಂದ ನುಗ್ಗಿ ಮೀಸಲಾತಿಯನ್ನು ಸರ್ವನಾಶ ಗೊಳಿಸುತ್ತಿರುವ ಕಾರ್ಪೋರೇಟ್ ಪರ ಖಾಸಗೀಕರಣಕ್ಕೆ ಧಿಕ್ಕಾರವಿದೆ. ಖಾಸಗಿ ಕ್ಷೇತ್ರದಲ್ಲು ಮೀಸಲಾತಿ ಜಾರಿಯಾಗಬೇಕು. ಲಾಭದ ದುರಾಸೆಗಾಗಿ ಮಹಿಳೆಯನ್ನು ಭೋಗದ ವಸ್ತುವಂತೆ ಬಿಂಬಿಸಿ ಅತ್ಯಾಚಾರಗಳ ಸರಮಾಲೆಗೆ ಕಾರಣವಾಗಿರುವ ಕಾರ್ಪೋರೇಟ್ ಸಂಸ್ಕೃತಿ ನಾಶವಾಗಬೇಕು. ಸಣ್ಣ–ಮಧ್ಯಮ ಉದ್ದಿಮಗಳನ್ನು ಸರ್ವನಾಶಗೊಳಿಸಿ ಯುವಜನರನ್ನು ನಿರುದ್ಯೋಗದ ಕೂಪಕ್ಕೆ ತಳ್ಳಿರುವ ಕಾರ್ಪೋರೇಟ್ ಕಂಪನಿಗಳಿಗೆ ಕಡಿವಾಣ ಬೀಳಬೇಕು. ವಯನಾಡು ಭೂ ಕುಸಿತ, ಅತ್ತಿವೃಷ್ಟಿ, ಅನಾವೃಷ್ಟಿಯಂತಹ ಪ್ರಾಕೃತಿಕ ವಿಕೋಪಗಳಿಗೆ ದೇಶವನ್ನು ತಳ್ಳುತ್ತಿರುವ ಕಾರ್ಪೋರೇಟ್ ಮಾದರಿ ಅಭಿವೃದ್ಧಿ ಕೊನೆಗೊಳ್ಳಲಿ ಎಂದು ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಕುಮಾರ್ ಸಮತಳ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಹೋರಕೇರಪ್ಪ, ಮಲ್ಲಿಕಾರ್ಜನ್, ಧನಂಜಯ, ಹಂಪಣ್ಣ, ಷಫಿವುಲ್ಲಾ, ಶಿವರುದ್ರಪ್ಪ, ಸಿದ್ದೇಶ್, ಶಿವಕುಮಾರ್, ಸೇರಿದಂತೆ ಇತರರು ಭಾಗವಹಿಸಿದ್ದರು.

ಪ್ರತಿಕೃತಿಗಾಗಿ ಕಿತ್ತಾಟ

ಈ ಪ್ರತಿಭಟನೆಯ ಸಮಯದಲ್ಲಿ ಪ್ರತಿಭಟನಾಕಾರರು ಕಾರ್ಪೋರೇಟ್ ಕಂಪನಿಗಳೇ ದೇಶ ಬಿಟ್ಟು ತೊಲಗಿ" ಪ್ರತಿರೋಧ ಕಂಪನಿ ಭೂತಗಳ ದಹನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಪ್ರತಿಭಟನೆಯಲ್ಲಿ ಮುಖಂಡರು ಮಾತನಾಡಿದ ನಂತರ ತಾವು ತಂದಿದ್ದ ಪ್ರತಿಕೃತಿಯನ್ನು ದಹನ ಮಾಡಲು ಪ್ರತಿಭಟನಾಕಾರರು ಮುಂದಾದರು ಈ ಸಮಯದಲ್ಲಿ ಅಲ್ಲಿದ್ದ ಪೋಲಿಸರು ಇದಕ್ಕೆ ಅವಕಾಶವನ್ನು ನೀಡದೆ ಅದನ್ನು ಕಿತ್ತುಕೊಳ್ಳುವುದಕ್ಕೆ ಮುಂದಾದರು ಆದರೂ ಸಹಾ ಪ್ರತಿಭಟನಾಕಾರರು ಅದನ್ನು ನೀಡದೆ ಅದಕ್ಕೆ ಬೆಂಕಿಯನ್ನು ಹಚ್ಚುವ ಕಾರ್ಯವನ್ನು ಮಾಡಲು ಮೂಂದಾದರು ಇಷ್ಟಾದರೂ ಸಹಾ ಪೋಲಿಸರು ಗೊಂಬೆಯನ್ನು ಕಿತ್ತುಕೊಳ್ಳುವ ಕಾರ್ಯವನ್ನು ಮಾತ್ರ ಬಿಡಲಿಲ್ಲ ಇದೇ ರೀತಿ ಪ್ರತಿಭಟನಾಕಾರರು ಸಹಾ ಗೊಂಬೆಯನ್ನು ನೀಡಲು ಮುಂದಾಗಲಿಲ್ಲ, ಆಮತು ಇಂತು ಕೊನೆಗೆ ಪೋಲಿಸರು ಪ್ರತಿಭಟನಾಕಾರರ ಬಳಿ ಇದ್ದ ಗೊಂಬೆಯನ್ನು ಕಿತ್ತುಕೊಳ್ಳುವಲ್ಲಿ ಯಶಸ್ವಿಯಾದರು. ಅಲ್ಲಿಂದಚ ಅದನ್ನು ಆಟೋದಲ್ಲಿ ಬೇರೆ ಕಡೆಗೆ ಸಾಗಿಸಲಾಯಿತು. ಇದಾದಮೇಲೆ ಪೋಲಿಸರು, ಪ್ರತಿಬಟನಾಕಾರರ ಮಧ್ಯೆ ಗೊಂಬೆ ಕಿತ್ತಾಟದಲ್ಲಿ ನೆಲದಲ್ಲಿ ಬಿದ್ದಿದ್ದೆ ಹುಲ್ಲಿಗೆ ಪ್ರತಿಭಟನಾಕಾರರು ಬೆಂಕಿಯನ್ನು ಹಚ್ಚುವುದರ ಮೂಲಕ ತಮ್ಮ ಆಕ್ರೋಶವನ್ನು ತೀರಿಸಿಕೊಂಡರು.

ಫಾಸ್ಟ್ ನ್ಯೂಸ್

ಮಹಿಳಾ ವಿದ್ಯಾರ್ಥಿಗಳಿಗೆ ಪತ್ರಿಕಾಲಯಗಳಲ್ಲಿ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಪದವಿ ಪಡೆದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಪತ್ರಿಕಾಲಯದಲ್ಲಿ ತರಬೇತಿ ಪಡೆಯಲು ಅರ್ಜಿ ಆಹ್ವಾನಿಸಿದೆ. ಪ್ರಸಕ್ತ ಸಾಲಿನಲ್ಲಿ 5 ಮಂದಿ ಮಹಿಳಾ ವಿದ್ಯಾರ್ಥಿಗಳಿಗೆ ಪ್ರಮುಖ ದಿನಪತ್ರಿಕೆಗಳ ಕಾರ್ಯಾಲಯಗಳಲ್ಲಿ 2 ತಿಂಗಳ ಕಾಲ ತರಬೇತಿ ಪಡೆಯಲು, ಮಾಸಿಕ ತಲಾ 20,000/– ರೂ ಗಳನ್ನು ಶಿಷ್ಯವೇತನ ನೀಡಲಾಗುವುದು. ಕರ್ನಾಟಕದ ಯಾವುದೇ ವಿಶ್ವವಿದ್ಯಾಲಯಗಳಲ್ಲಿ ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ/ಪದವಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಆದ್ಯತೆ ನೀಡಲಾಗಿದೆ. ಮಹಿಳಾ ವಿದ್ಯಾರ್ಥಿಗಳು ಆಗಸ್ಟ್ 26 ರೊಳಗೆ ತಮ್ಮ ಸ್ವವಿವರ, ದೂರವಾಣಿ ಸಂಖ್ಯೆ, ಇ–ಮೇಲ್ ವಿಳಾಸ, ಆರ್ಥಿಕ ಸ್ಥಿತಿ, ಅಂಕಪಟ್ಟಿಗಳ ಫೋಟೋ ಪ್ರತಿಯನ್ನು ಸ್ಕ್ಯಾನ್ ಮಾಡಿ karnatakamediaacademy@gmail.comಗೆ ಇಮೇಲ್ ಮೂಲಕ ಕಳುಹಿಸಬಹುದು. 28 ವರ್ಷದೊಳಗಿನ ಮಹಿಳಾ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅಕಾಡೆಮಿಯು ಅರ್ಹತಾ ಪರೀಕ್ಷೆ ನಡೆಸಲಿದೆ. ಈ ಪರೀಕ್ಷೆಯ ದಿನಾಂಕ, ಸ್ಥಳ ಮತ್ತು ಸಮಯವನ್ನು ಸಂದರ್ಶನದ ವೇಳೆ ತಿಳಿಸಲಾಗುವುದು.

ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿಗೆ ವಿವಿಧ ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹಿಂದುಳಿದ ವರ್ಗಗಳ ಪ್ರವರ್ಗ–3 ರಲ್ಲಿ ಬರುವ ಒಕ್ಕಲಿಗ, ವಕ್ಕಲಿಗ, ಸರ್ಪ ಒಕ್ಕಲಿಗ, ಹಳ್ಳಿಕಾರ್ ಒಕ್ಕಲಿಗ, ನಾಮಧಾರಿ ಒಕ್ಕಲಿಗ, ಗಂಗಾಡ್ಕಾರ್ ಒಕ್ಕಲಿಗ, ರೆಡ್ಡಿ ಒಕ್ಕಲಿಗ, ಮರಸು ಒಕ್ಕಲಿಗ, ಗೌಡ, ಹಳ್ಳಿಕಾರ್, ಕುಂಚಿಟಿಗ, ಗೌಡ, ಕಾಪು, ಹೆಗ್ಗಡೆ, ಕಮ್ಮ, ರೆಡ್ಡಿ, ಗೌಂಡರ್, ನಾಮಧಾರಿಗೌಡ, ಉಪ್ಪಿನ ಕೊಳಗ/ ಉತ್ತಮ ಕೊಳಗ ಸಮುದಾಯಕ್ಕೆ ಸೇರಿದ ಜನಾಂಗದವರು ಅರ್ಜಿ ಸಲ್ಲಿಸಬಹುದು. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸ್ವಯಂ ಉದ್ಯೋಗ ನೇರ ಸಾಲ, ಗಂಗಾ ಕಲ್ಯಾಣ ನೀರಾವರಿ, ಅರಿವು–ಶೈಕ್ಷಣಿಕ ಸಾಲ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ , ಸ್ವಯಂ ಉದ್ಯೋಗ ಸಾಲ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಯೋಜನೆಗಳಲ್ಲಿ ಆರ್ಥಿಕ ನೆರವು ನೀಡಲಾಗುವುದು. ಸೇವಾಸಿಂಧು ಪೋರ್ಟಲ್ http://sevasindhu.karnataka.gov.in , ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳ ಮೂಲಕ ಅರ್ಜಿ ಸಲ್ಲಿಸಬಹುದು. ನಿಗಮದ ಯೋಜನೆಗಳಲ್ಲಿ ಒಂದು ಬಾರಿ ಯಾವುದಾದರು ಯೋಜನೆಯ ಪ್ರಯೋಜನೆ ಪಡೆದಿದ್ದಲ್ಲಿ ಅಂತಹವರು ಹಾಗೂ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿತರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಅರ್ಜಿದಾರರ ಆಧಾರ್ ಕಾರ್ಡ ಹಾಗೂ ಬ್ಯಾಂಕ್ ಖಾತೆ ಜೋಡಣೆಯಾಗಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿನ ಹೆಸರು ಹೊಂದಾಣಿಕೆಯಾಗಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ಸೈಟ್ www.kvcdc.karnataka.gov.in ಅಥವಾ ನಿಗಮದ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08194–220882 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

ವಲಯ ಅರಣ್ಯ ಅಧಿಕಾರಿ ಬಹುಗುಣ ವರ್ಗ: ಮಂಜುನಾಥ ಅಧಿಕಾರ ಸ್ವೀಕಾರ

ಚಳ್ಳಕೆರೆ: ನಗರದ ಅರಣ್ಯ ಇಲಾಖೆಯಲ್ಲಿ ಕಳೆದ ಎರಡು ವರ್ಷಗಳಿಂದ ವಲಯ ಅರಣ್ಯ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಬಹುಗುಣ ಇವರನ್ನು ಅರಣ್ಯ ಇಲಾಖೆಯ ಬೆಂಗಳೂರಿನ ಕೇಂದ್ರ ಕಚೇರಿಗೆ ವರ್ಗಾವಣೆ ಮಾಡಲಾಗಿದೆ. ದಾವಣಗೆರೆ ವಲಯ ಅರಣ್ಯ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಎಸ್.ವಿ.ಮಂಜುನಾಥರವರನ್ನು ಚಳ್ಳಕೆರೆ ವಲಯ ಅರಣ್ಯಾಧಿಕಾರಿಯಾಗಿ ನೇಮಿಸಿ ಸರ್ಕಾರ ಆದೇಶ ಹೊರಡಿಸಿದ್ದು, ಶುಕ್ರವಾರ ಎಸ್.ವಿ.ಮಂಜುನಾಥ ಬಹುಗುಣರವರಿಂದ ಅಧಿಕಾರ ಸ್ವೀಕರಿಸಿದರು. ಕಚೇರಿಯ ಎಲ್ಲಾ ಸಿಬ್ಬಂದಿ ವರ್ಗ ಹಾಗೂ ಸಾರ್ವಜನಿಕರು ವರ್ಗಾವಣೆಗೊಂಡ ಬಹುಗುಣ ಹಾಗೂ ನೂತನವಾಗಿ ಅಧಿಕಾರ ವಹಿಸಿಕೊಂಡು ಮಂಜುನಾಥರವರನ್ನು ಸನ್ಮಾನಿಸಿ ಅಭಿನಂದಿಸಿದರು.

ಬಾರ್‌ನಲ್ಲಿ ಬಾಲಕಾರ್ಮಿಕನ ರಕ್ಷಣೆ

ಚಿತ್ರದುರ್ಗ: ಪಾನ್–ಇಂಡಿಯಾ ರೆಸ್ಕೋ ಅಂಡ್ ರಿಹ್ಯಾಬಿಲಿಟೇಶನ್ ಕ್ಯಾಂಪೇನ್ ಅಂಗವಾಗಿ ಹಿರಿಯೂರು ನಗರದಲ್ಲಿ ಬಾಲ್ಯ ಮತ್ತು ಕಿಶೋರಾವಸ್ಥೆ ಕಾರ್ಮಿಕ ನಿಷೇಧ ಕುರಿತು ಶುಕ್ರವಾರ ಅಧಿಕಾರಿಗಳ ತಂಡ ದಾಳಿ ನಡೆಸಿತು. ಹಿರಿಯೂರು ನಗರದ ವಿವಿಧ ವಾಣಿಜ್ಯ ಸಂಸ್ಥೆಗಳು ಹಾಗೂ ಬಾರ್ ಅಂಡ್ ರೆಸ್ಟೋರೆಂಟ್‌ಗಳನ್ನು ಭೇಟಿ ಮಾಡಿ ಪರಿಶೀಲಿಸಲಾಗಿ ಬಾರ್‌ನಲ್ಲಿ ಕೆಲಸ ಮಾಡುತ್ತಿದ್ದ ಬಾಲಕಾರ್ಮಿಕನನ್ನು ಕೆಲಸದಿಂದ ಬಿಡುಗಡೆಗೊಳಿಸಿ, ಚಿತ್ರದುರ್ಗ ಸರ್ಕಾರಿ ಬಾಲಕರ ಬಾಲಮಂದಿರ ದಾಖಲು ಮಾಡಲಾಯಿತು. ನಂತರ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದರು.

ಪ್ರಮುಖ ಸುದ್ದಿ

ಲಾರಿ ಮಾಲಿಕರ ಸಂಘದವತಿಯಿಂದ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇಳಿ ಬಳಿ ಪ್ರತಿಭಟನೆ

70:30ರ ಅನುಪಾತದಲ್ಲಿ ಅದಿರು ಸಾಗಾಣಿಕೆಗೆ ಸೂಚಿಸಿ

» ಚಿತ್ರದುರ್ಗ

ಜಿಲ್ಲಾಡಳಿತ ಮತ್ತು ವೇದಾಂತ ಗಣಿ ಕಂಪನಿಯವರ ಜೋತೆ ನಡೆದ ಸಭೆಯ ತಿರ್ಮಾನದಂತೆ ಶೇ.70/30ರ ಅನುಪಾತದ ಅಡಿಯಲ್ಲಿ ಅದಿರು ಸಾಗಾಣಿಕೆ ಮಾಡಿಕೊಡಲು ಸೂಚಿಸಿ ನಮಗೆ ನ್ಯಾಯ ದೊರಕಿಸಿಕೊಡಬೇಕೆಂದು ಆಗ್ರಹಿಸಿ ಶುಕ್ರವಾರ ಚಿತ್ರದುರ್ಗ ಅದಿರು ಮತ್ತು ಸರಕು ಸಾಗಾಣಿಕೆ ಲಾರಿ ಮಾಲಿಕರ ಸಂಘದವತಿಯಿಂದ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇಳಿ ಬಳಿ ಪ್ರತಿಭಟನೆ ನಡೆಸಲಾಯಿತು.

04–07–2013 ರಂದು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಸಭೆಯಲ್ಲಿ ಜಿಲ್ಲಾಧಿಕಾರಿಗಳಾದ ವಿ.ಪಿ.ಇಕ್ಕೇರಿ ಅಧ್ಯಕ್ಷತೆಯಲ್ಲಿ ಸಭೇಯನ್ನು ನಡೆದಿದ್ದು, ಇದರಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಗಣಿ ಗುತ್ತಿಗೆ ಪ್ರತಿನಿಧಿಗಳು ಮತ್ತು ಲಾರಿ ಮಾಲೀಕರು ಪ್ರತಿನಿಧಿಗಳು ನಡೆದ ಸಭೆಯಲ್ಲಿ ಹಿರೇಗುಂಟನೂರು ಹೋಬಳಿ, ಬೆದರುಬೊಮ್ಮೇನಹಳ್ಳಿ ಮತ್ತು ಮೇಗಳಹಳ್ಳಿ ಮಿನರಲ್ ಎಂಟರ್ ಪ್ರೈಸಸ್ ಮತ್ತು ಸೆಸಾಗೋವಾ (ವೇದಾಂತ ಮೈನ್ಸ್) ಗಣಿ ಗುತ್ತಿಗೆಪ್ರದೇಶದಿಂದರವಾನೆಯಾಗುತ್ತಿರುವ ಕಬ್ಬಿಣದ ಅದಿರನ್ನು ಒಟ್ಟು ಉತ್ಪಾದನೆ ಆಗುತ್ತಿರುವ ವಾರ್ಷಿಕ ಸರಾಸರಿ ಅದರಲ್ಲಿ ಶೇ.30 ರಷ್ಟು ಕಬ್ಬಿಣದ ಅಧಿರನ್ನು ಮತ್ತು ಶೇ.70ರಷ್ಟು ರೈಲ್ವೆ ಮೂಲಕ ಸಾಗಾಣಿಕೆ ಮಾಡುತ್ತೇವೆಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ತೀರ್ಮಾನವಾಗಿತ್ತು. ಆದರೆ ಗಣಿ ಕಂಪನಿಗಳು ಸಮಿತಿಯ ತೀರ್ಮಾನವನ್ನು ಉಲ್ಲಂಘನೆ ಮಾಡಿ ಉತ್ಪಾದನೆಯಾಗುತ್ತಿರುವ ಶೇ.100 ರಷ್ಟು ಭಾಗ ಅದಿರನ್ನು ರೈಲ್ವೆ ಮುಖಾಂತರ ಈ ದಿನಾಂಕದವರೆಗೂ ಸಾಗಾಣಿಕೆ ಮಾಡುತ್ತಿರುತ್ತಾರೆ. ಆದ್ದರಿಂದ ಚಿತ್ರದುರ್ಗ ಅದಿರು ಮತ್ತು ಸರಕು ಸಾಗಾಣಿಕೆ ಲಾರ

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕರ್ನಾಟಕ ರಾಜ್ಯ ಕಾಡುಗೊಲ್ಲರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಟನೆ

» ಚಿತ್ರದುರ್ಗ

ಕಾಡುಗೊಲ್ಲ ಜನಾಂಗಕ್ಕೆ ಜಾತಿ ಪ್ರಮಾಣ ಪತ್ರ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ಕಾಡುಗೊಲ್ಲರ ಕ್ಷೇಮಾಭಿವೃದ್ಧಿ ಸಂಘದಿಂದ ಒನಕೆ ಓಬವ್ವ ವೃತ್ತದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿ ಉಪ ವಿಭಾಗಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಕೋಲಾಟ, ಮಣೇವು, ಸೋಬಾನೆ, ತಮಟೆ ಸಿದ್ದಿಗೆ ಕಾಡುಗೊಲ್ಲರು ಕುಣಿದು ಕೇಕೆ ಹಾಕುತ್ತ ಬೇಡಿಕೆಗಳ ಈಡೇರಿಕೆಗಾಗಿ ಸರ್ಕಾರದ ಗಮನ ಸೆಳೆದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಕರ್ನಾಟಕ ರಾಜ್ಯ ಕಾಡುಗೊಲ್ಲರ ಸಂಘದ ರಾಜ್ಯಾಧ್ಯಕ್ಷ ಸಿ.ಶಿವುಯಾದವ್ ಸರ್ಕಾರದಿಂದ ಯಾವುದೇ ರೀತಿಯ ಸೌಲಭ್ಯಗಳನ್ನು ಪಡೆದುಕೊಳ್ಳಬೇಕಾದರೆ ಕಾಡುಗೊಲ್ಲರನ್ನು ಅಲೆಮಾರಿ ಪಟ್ಟಿಗೆ ಸೇರ್ಪಡೆಗೊಳಿಸಬೇಕು. ಕಾಡುಗೊಲ್ಲರ ಕುಲಶಾಸ್ತ್ರ ಅಧ್ಯಯನ ನಡೆಸಿ ಪರಿಶಿಷ್ಟ ವರ್ಗಕ್ಕೆ ಸೇರ್ಪಡೆಗೊಳಿಸುವಂತೆ



ಸಿದ್ದರಾಮಯ್ಯನವರು ಕೇಂದ್ರಕ್ಕೆ ವರದಿ ನೀಡಿರುವುದನ್ನು ಹಿಂದಕ್ಕೆ ಕಳಿಸಿದೆ. ಮುಖ್ಯಮಂತ್ರಿ ಮತ್ತೊಮ್ಮೆ ಪರಿಶೀಲಿಸಿ ಕೇಂದ್ರಕ್ಕೆ ಕಳಿಸಿಕೊಡಬೇಕು. ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ಕಾಡುಗೊಲ್ಲರನ್ನೇ ಅಧ್ಯಕ್ಷರನ್ನಾಗಿ ನೇಮಕ ಮಾಡುವಂತೆ ಒತ್ತಾಯಿಸಿದರು.2004 ರಲ್ಲಿ ಕರ್ನಾಟಕ ರಾಜ್ಯ ಕಾಡುಗೊಲ್ಲರ ಕ್ಷೇಮಾಭಿವೃದ್ಧಿ ಸಂಘವನ್ನು ಹುಟ್ಟು ಹಾಕಿ ಅಂದಿನಿಂದ ಇಲ್ಲಿಯವರೆಗೂ ಬೇಡಿಕೆಗಳ ಈಡೇರಿಕೆಗಾರಿ ಹೋರಾಟ ಮಾಡಿಕೊಂಡು ಬರಲಾಗುತ್ತಿದೆ. ನಮ್ಮ ಜನಾಂಗದಲ್ಲಿ ಪ್ರಭಾವಿ ರಾಜಕಾರಣಿಗಳು ಇಲ್ಲದ ಕಾರಣ ನಮ್ಮನ್ನು ತಿರಸ್ಕಾರದಿಂದ ಕಾಣಲಾಗುತ್ತಿದೆ. ಕೇಂದ್ರ ಸರ್ಕಾರ ಕೂಡಲೆ ಕಾಡುಗೊಲ್ಲರನ್ನು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಗೊಳಿಸಬೇಕು ಎಂದು ಮನವಿ ಮಾಡಿದರು. ಕಾಡುಗೊಲ್ಲರು ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಯಾಗುವತನಕ ಪ್ರವರ್ಗ–1 ರ ಮೀಸಲಾತಿಯನ್ನು ಮುಂದುವರೆಸಲು ಸ್ಪಷ್ಟ ಆದೇಶ ಹೊರಡಿಸಬೇಕು. ಅಲೆಮಾರಿ ಅರೆಅಲೆಮಾರಿ ವಸತಿ ಯೋಜನೆಯಡಿ ನೀಡುವ ಹಣದ ಮೊತ್ತವನ್ನು ಒಂದು ಲಕ್ಷದ ಇಪ್ಪತ್ತು ಸಾವಿರದಿಂದ ಐದು ಲಕ್ಷ ರೂ.ಗಳಿಗೆ ಹೆಚ್ಚಿಸಬೇಕೆಂದು ಶಿವು ಯಾದವ್ ಆಗ್ರಹಿಸಿದರು.

ಹೊಳಲ್ಕೆರೆ ಮಾಜಿ ಶಾಸಕ ಎ.ವಿ.ಉಮಾಪತಿ, ಜಿಲ್ಲಾಧ್ಯಕ್ಷ ಡಿ.ಶಿವಣ್ಣ, ಉಪಾಧ್ಯಕ್ಷ ಡಿ.ರಾಜಣ್ಣ, ತಾಲ್ಲೂಕು ಅಧ್ಯಕ್ಷ ಹರೀಶ್ ಪೂಜಾರ್, ವಿಧಾನಪರಿಷತ್ ಮಾಜಿ ಸದಸ್ಯೆ ಜಯಮ್ಮಬಾಲರಾಜ್, ಎಸ್.ತಿಮ್ಮಯ್ಯ ಮ್ಯಾಕ್ಲೂರಹಳ್ಳಿ, ಸುದೀಪ, ರಾಘವೇಂದ್ರ, ಮೂಡಲಗಿರಿ, ತಿಮ್ಮೇಶಿ, ಡಾ.ಜಿ.ಕೆ.ಪ್ರೇಮ, ಸುನಂದಮ್ಮ, ಅನ್ನಪೂರ್ಣಮ್ಮ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಕಾರ್ಯಾಧ್ಯಕ್ಷ ಈಚಘಟ್ಟದ ಸಿದ್ದವೀರಪ್ಪ ಪ್ರತಿಭಟನೆಯಲ್ಲಿ ಪಾಲ್ಗೊಂಡು ಕಾಡುಗೊಲ್ಲರಿಗೆ ಬೆಂಬಲ ನೀಡಿದರು.

ಫಾಸ್ಟ್ ನ್ಯೂಸ್

ಆಗಸ್ಟ್ 12 ರಿಂದ 15 ರವರೆಗೆ ನಶಾ ಮುಕ್ತ ಭಾರತ ಅಭಿಯಾನ

» ಚಿತ್ರದುರ್ಗ

78ನೇ ಸ್ವಾತಂತ್ರ್ಯ ಮಹೋತ್ಸವದ ಅಂಗವಾಗಿ ಆಗಸ್ಟ್ 12 ರಿಂದ 15 ವರೆಗೆ ನಶಾ ಮುಕ್ತ ಭಾರತ ಅಭಿಯಾನ ಆಯೋಜಿಸಲಾಗಿದೆ. ಇದರ ಅಂಗವಾಗಿ ಆಗಸ್ಟ್ 12 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜು, ಮಹಾವಿದ್ಯಾಲಯ, ತಾಂತ್ರಿಕ ಹಾಗೂ ವೈದ್ಯಕೀಯ ಮಹಾವಿದ್ಯಾಲಯ, ಐಟಿಐ, ಐಐಎಂಎಸ್, ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞಾ ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಲಾ ಕಾಲೇಜು ಆವರಣಗಳಲ್ಲಿ ನಶಾ ಮುಕ್ತ ಭಾರತ ಅಭಿಯಾನದ ನೆನಪಿನ ಪ್ರಯುಕ್ತ ಸಸಿಗಳನ್ನು ನೆಡುವುದು. ಆಗಸ್ಟ್ 15 ವರೆಗೆ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು, ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ವಿಚಾರಗೋಷ್ಠಿ, ಕಾರ್ಯಾಗಾರ, ರ್‍ಯಾಲಿ, ಮ್ಯಾರಥಾನ್ ಹಾಗೂ ಬೀದಿ ನಾಟಕಗಳನ್ನು ಪ್ರಸ್ತುತ ಪಡಿಸಲಾಗುವುದು. ಆಗಸ್ಟ್ 15ರಂದು ಸ್ವಾತಂತ್ರ್ಯ ದಿನಾಚರಣೆಯ ಮುಖ್ಯ ಅತಿಥಿಗಳ ಭಾಷಣದಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಕುರಿತು ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದ್ದಾರೆ. ಕಾರ್ಯಕ್ರಮಗಳನ್ನು ಆಯೋಜಿಸಿರುವ ಕುರಿತು ಫೋಟೊ ವಿಡಿಯೋ ಹಾಗೂ ವರದಿಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಇ–ಮೇಲ್ ಐಡಿ ddwocta@gmail.com ಅಥವಾ ವಾಟ್ಸ್‌ಪ್ ಸಂಖ್ಯೆ 9731282405 ಕಳುಹಿಸಲು ತಿಳಿಸಿದೆ.

ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ಹೊಸದಾಗಿ ಪ್ರವೇಶಾತಿ ಕಲ್ಪಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 9 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಸೆಪ್ಟೆಂಬರ್4ಅರ್ಜಿಸಲ್ಲಿಸಲುಕೊನೆಯದಿನವಾಗಿದೆ. ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು https://shp.karnataka.gov.in/bcwd ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಪ್ರವರ್ಗ–1, ಎಸ್.ಸಿ ಮತ್ತು ಎಸ್.ಟಿ ವರ್ಗಗಳಿಗೆ ವಾರ್ಷಿಕ ಆದಾಯ 2.50 ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಗಳ ವಾರ್ಷಿಕ ಆದಾಯ ರೂ.1ಲಕ್ಷ ಹೊಂದಿರಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ–ಮೇಲ್ ಮುಖಾಂತರ ಅಥವಾ ಹಿಂದುಳಿದ ವರ್ಗಗಳ ಜಿಲ್ಲಾ, ತಾಲ್ಲೂಕು ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004, 8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಚಿತ ಆರೋಗ್ಯ ತಪಾಸಣಾ ಶಿಬಿರ

» ಚಿತ್ರದುರ್ಗ

ಪ್ರತಿ ವರ್ಷದಂತೆ ಈ ಬಾರಿಯ ಶ್ರಾವಣ ಮಾಸದ ಪ್ರಯುಕ್ತ ಹೊಳಲ್ಕೆರೆ ತಾಲ್ಲೂಕು ಕೊಳಾಳು ಗ್ರಾಮದಲ್ಲಿ ಆ.10 ರ ಇಂದು ಬೆಳಿಗ್ಗೆ 10–30 ರಿಂದ ಎಸ್.ಜೆ.ಎಂ.ವಿದ್ಯಾಪೀಠದ ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ತಜ್ಞ ವೈದ್ಯರುಗಳಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ಸಂಜೆ 5–30 ಕ್ಕೆ ಗ್ರಾಮದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಾಗೂ ಆರು ಗಂಟೆಗೆ ಅನುಭಾವ ಗೋಷ್ಠಿಯಿರುತ್ತದೆ. ಬೆಳಿಗ್ಗೆ 5–30 ಕ್ಕೆ ಕೆಂಚಾವಧೂತರ ಗದ್ದುಗೆಗೆ ವಿಶೇಷ ಪೂಜೆ, ಡಾ.ಬಸವ ಮಹಾಂತ ಮಹಾಸ್ವಾಮಿಗಳು, ಬಸವ ಮಹಾಲಿಂಗ ಸ್ವಾಮಿಗಳು ಸಾನಿಧ್ಯ ವಹಿಸಲಿದ್ದಾರೆ. ನಿವೃತ್ತ ಪ್ರೌಢಶಾಲೆ ಮುಖ್ಯ ಶಿಕ್ಷಕ ಡಿ.ಎನ್.ಗೋವಿಂದಪ್ಪ, ಅಲ್ಲಮ ಪ್ರಭು ದೇವರ ವಿಚಾರ ಕುರಿತು ಉಪನ್ಯಾಸ ನೀಡುವರು. ಡಾ.ಬಸವಕುಮಾರ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸಲಿದ್ದಾರೆಂದು ಕೆಂಚಾವಧೂತರ ಮಠದ ಭಕ್ತ ವೃಂದದವರು ವಿನಂತಿಸಿದ್ದಾರೆ.

ಶೈಲಜಮ್ಮ ನಿಧನ

» ಚಿತ್ರದುರ್ಗ

ನಗರದ ಹೊಳಲ್ಕೆರೆ ರಸ್ತೆಯ ಬಿವಿಕೆ ಬಡಾವಣೆಯಲ್ಲಿನ ನಿವಾಸಿ ಶ್ರೀಮತಿ ಶೈಲಜಮ್ಮ (84) ವಿಶ್ವನಾಥಯ್ಯ ಶುಕ್ರವಾರ ಬೆಳಿಗ್ಗೆ 11.30ಕ್ಕೆ ತಮ್ಮ ನಿವಾಸದಲ್ಲಿ ನಿಧನರಾಗಿದ್ದಾರೆ. ಮೃತರು ಮೂರು ಜನ ಗಂಡು ಮಕ್ಕಳು ಹಾಗೂ ಓರ್ವ ಮಗಳನ್ನು ಸೇರಿದಂತೆ ಅಪಾರವಾದ ಬಂಧು ಬಳಗವನ್ನು ಆಗಲಿದ್ದಾರೆ.

ಮೈಸೂರು ಚಲೋ: ವಿಜಯೇಂದ್ರ ಜೊತೆ ಹೆಜ್ಜೆ ಹಾಕಿದ ಚಿತ್ರದುರ್ಗದ ಎಂ.ಸಿ.ರಘುಚಂದನ್

» ಚಿತ್ರದುರ್ಗ

ಮುಡಾ ನಿವೇಶನ ಹಗರಣ ಮತ್ತು ಕರ್ನಾಟಕ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ 187 ಕೋಟಿ ರೂ.ಗಳ ದುರ್ಬಳಕೆಗೆ ಸಂಬಂಧಿಸಿದಂತೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜೀನಾಮೆ ನೀಡಬೇಕೆಂದು ಪಟ್ಟು ಹಿಡಿದು ಬಿಜೆಪಿ. ಜೆಡಿಎಸ್. ನಡೆಸುತ್ತಿರುವ ಮೈಸೂರು ಚಲೋ ಪಾದಯಾತ್ರೆಯಲ್ಲಿ ಪಾಲ್ಗೊಂಡಿರುವ ಚಿತ್ರದುರ್ಗದ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಬಿಜೆಪಿ. ಯುವ ಮುಖಂಡ ಎಂ.ಸಿ.ರಘುಚಂದನ್ ಬಿಜೆಪಿ. ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರರವರಿಗೆ ದೊಡ್ಡ ಗಾತ್ರದ ಸೇಬಿನ ಹಾರ ಹಾಕಿ ಐದನೆ ದಿನದ ಪಾದಯಾತ್ರೆಯಲ್ಲಿ ಹೆಜ್ಜೆ ಹಾಕಿದರು.

ಬಿಜೆಪಿ.ಯ ಸಿ.ಟಿ.ರವಿ, ಜೆಡಿಎಸ್.ನ ನಿಖಿಲ್ ಕುಮಾರಸ್ವಾಮಿ, ಹೊಳಲ್ಕೆರೆ ಬಿಜೆಪಿ. ಮಂಡಲ ಅಧ್ಯಕ್ಷ ಸಿದ್ದೇಶ್, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ರೂಪ ಸುರೇಶ್, ಜಿಲ್ಲಾ ವಕ್ತಾರ ನಾಗರಾಜ್‌ಬೇದ್ರೆ, ಎ.ಪಿ.ಎಂ.ಸಿ. ಮಾಜಿ ಅಧ್ಯಕ್ಷ ಅಂಕಳಪ್ಪ, ಯುವ ಮೋರ್ಚಾ ತಾಲ್ಲೂಕು ಅಧ್ಯಕ್ಷ ಅರುಣ್, ಮಹಿಳಾ ಮೋರ್ಚಾ ಅಧ್ಯಕ್ಷೆ ಸರಸ್ವತಿ, ಬಿಜೆಪಿ. ಮುಖಂಡ ಮೋಹನ್ ಸೇರಿದಂತೆ ಹೊಳಲ್ಕೆರೆ ತಾಲ್ಲೂಕಿನಿಂದ ಎರಡು ಸಾವಿರ ಕಾರ್ಯಕರ್ತರು ಪಾದಯಾತ್ರೆಯಲ್ಲಿ ಪಾಲ್ಗೊಂಡಿದ್ದಾರೆ.

ಸ್ವಾತಂತ್ರ್ಯ ಹೋರಾಟಗಾರ ಭೀಮಪ್ಪಗೆ ಜಿಲ್ಲಾಡಳಿತ ಸನ್ಮಾನ

» ಚಿತ್ರದುರ್ಗ

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಚಿತ್ರದುರ್ಗ ತಾಲ್ಲೂಕಿನ ಕೂನಬೇವು ಗ್ರಾಮದಲ್ಲಿನ ಸ್ವಾತಂತ್ರ್ಯ ಹೋರಾಟಗಾರರಾದ ಭೀಮಪ್ಪ ಅವರಿಗೆ ಶುಕ್ರವಾರ ಜಿಲ್ಲಾಡಳಿತದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವ ಸಮರ್ಪಿಸಲಾಯಿತು. ಇದೇ ಆಗಸ್ಟ್ 15ರಂದು ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು, ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ ಸ್ವಾತಂತ್ರ್ಯ ಹೋರಾಟಗಾರರ ಮನೆಗೆ ತೆರಳಿ ಸನ್ಮಾನಿಸಬೇಕು ಎಂಬುದಾಗಿ ಸರ್ಕಾರದ ನಿರ್ದೇಶನದಂತೆ, ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಚಿತ್ರದುರ್ಗ ತಾಲ್ಲೂಕಿನ ಕೂನಬೇವು ಗ್ರಾಮಕ್ಕೆ ತೆರಳಿ ಸ್ವಾತಂತ್ರ್ಯ ಹೋರಾಟಗಾರರಾದ ಭೀಮಪ್ಪ ಬಿನ್ ವೆಂಕಟಪ್ಪ ಅವರಿಗೆ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಸೇರಿದಂತೆ ಮತ್ತಿತರರು ಇದ್ದರು.

ಚಿತ್ರದುರ್ಗದ ಹನುಮಂತಪ್ಪ ಎಸ್.ಎನ್.ರವರಿಗೆ ಪಿ.ಹೆಚ್.ಡಿ. ಪದವಿ ಪ್ರದಾನ

ಚಿತ್ರದುರ್ಗ : ದಾವಣಗೆರೆ ಯು.ಬಿ.ಡಿ.ಟಿ. ಇಂಜಿನಿಯರಿಂಗ್ ಕಾಲೇಜ್‌ನ ಸಹಾಯಕ ಪ್ರಾಧ್ಯಾಪಕ ಚಿತ್ರದುರ್ಗ ನೆಹರು ನಗರದ ಒಂದನೆ ಕ್ರಾಸ್ ನಿವಾಸಿ ಹನುಮಂತಪ್ಪ ಎಸ್. ಎನ್. ಇವರಿಗೆ ಪಿ.ಹೆಚ್.ಡಿ. ಪದವಿ ಲಭಿಸಿದೆ. ಬೆಂಗಳೂರಿನ ಕೆ.ಎಸ್.ಎಸ್.ಇ.ಎಂ. ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕ ಡಾ.ಗಿರೀಶ್ ವಿ.ಅತ್ತಿಮರದ್ ಇವರ ಮಾರ್ಗದರ್ಶನದಲ್ಲಿ ಡಿಸೈನ್ ಆಫ್ ಎನರ್ಜಿ ಎಫಿಶಿಯಂಟ್ ಅಂಡ್ ಫಾಲ್ಟ್ ಟಾಲರೆಂಟ್ ವೈರ್‌ಲೆಸ್ ಸೆನ್ಸಾರ್ ಆಫ್ ನೆಟ್‌ವರ್ಕ್ ಎಂಬ ವಿಷಯದ ಕುರಿತು ಮಂಡಿಸಿರುವ ಪ್ರಬಂಧಕ್ಕೆ ಬೆಳಗಾವಿ ವಿಶ್ವವಿದ್ಯಾನಿಲಯ ಕುಲಪತಿ ಡಾ.ಎಸ್.ವಿದ್ಯಾಶಂಕರ್ ಬೆಳಗಾವಿಯಲ್ಲಿ ನಡೆದ 24 ನೇ ವಾರ್ಷಿಕ ಘಟಿಕೋತ್ಸವದಲ್ಲಿ ಹನುಮಂತಪ್ಪ ಎಸ್. ಎನ್.ರವರಿಗೆ ಪಿ.ಹೆಚ್.ಡಿ. ಪದವಿ ಪ್ರದಾನ ಮಾಡಿದರು.

ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ: ಸಾಲಸೌಲಭ್ಯಕ್ಕೆ ಅರ್ಜಿ

ಚಿತ್ರದುರ್ಗ: ಹಿಂದುಳಿದ ವರ್ಗಗಳ ಪ್ರವರ್ಗ–2ಎ ಗೆ ಸೇರಿದ ಮಡಿವಾಳ ಮತ್ತು ಇದರ ಉಪಜಾತಿಗೆ ಸೇರಿದ ಜನಾಂಗದವರ ಆರ್ಥಿಕ ಅಭಿವೃದ್ಧಿಗಾಗಿ 2024–25ನೇ ಸಾಲಿನ ವಿವಿಧ ಯೋಜನೆಯಡಿ ಅನುಕೂಲವಾಗುವಂತೆ ಸಾಲ ಸೌಲಭ್ಯ ಪಡೆಯಲು ಸೇವಾಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ಸೈಟ್ www.kmmd.karnatak.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080–22374832, 850770004 ಮತ್ತು 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08194–220882 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕ ಹೆಚ್.ಶಿಲ್ಪಾ ತಿಳಿಸಿದ್ದಾರೆ.

ಪ್ರಮುಖ ಸುದ್ದಿ

ಆದಿವಾಸಿ ಜನಾಂಗಕ್ಕೆ ಸರ್ಕಾರದ ಸೌಲಭ್ಯ ಸಿಗಬೇಕು: ಶಾಸಕ

» ದಾವಣಗೆರೆ

ಆದಿವಾಸಿ ಜನಾಂಗ ಇಂದಿಗೂ ಹಿಂದುಳಿದಿದೆ, ಅವರನ್ನ ಸಮಾಜದ ಮುಖ್ಯವಾಹಿನಿಗೆ ತರಬೇಕು, ಸರ್ಕಾರದಿಂದ ಸೂಕ್ತ ಸೌಲಭ್ಯ ಸಿಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಶಾಂತಾರಾಮ್ ಸಿದ್ದಿ ತಿಳಿಸಿದರು.ನಗರದ ಬಂಬೂ ಬಜಾರ್‌ನ ಶ್ರೀಮಲ್ಲಿಕಾರ್ಜುನ ಸ್ವಾಮಿ ಕಲ್ಯಾಣ ಮಂಟಪದಲ್ಲಿ ನಡೆದ 30 ನೇ ಆದಿವಾಸಿ ವಿಶ್ವಸಮ್ಮೇಳನದಲ್ಲಿ ಈ ವಿಷಯ ತಿಳಿಸಿದರು. ಹುಲಿ ಸಂರಕ್ಷಿತ ಅರಣ್ಯ ಸೇರಿ ನಾನಾ ಯೋಜನೆಗಳಿಗಾಗಿ ಆದಿವಾಸಿಗಳನ್ನು ಕಾಡಿನಿಂದ ಒಕ್ಕಲೆಬ್ಬಿಸುವ ಸರಕಾರ, ಪುನರ್ವಸತಿ ಕೇಂದ್ರಕ್ಕೆ ಕಳುಹಿಸುತ್ತದೆ. ಆದರೆ, ಹೀಗೆ ಎತ್ತಂಗಡಿಯಾದ ಜನರ ಭೂಮಿ, ಕುಡಿಯುವ ನೀರಿನ ಸಮಸ್ಯೆ ಇನ್ನೂ ಬಗೆಹರಿದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕೇಂದ್ರ ಮತ್ತು ರಾಜ್ಯ ಸರಕಾರಗಳು ಆದಿವಾಸಿಗಳಿಗಾಗಿ ರೂಪಿಸುವ ಬಹಳಷ್ಟು ಯೋಜನೆಗಳು ಯಶಸ್ವಿಯಾಗಿಲ್ಲ. ಜಿಪಂ, ತಾಪಂ ಚುನಾವಣೆಯ ನೆಪದಲ್ಲಿ ಇನ್ನೂ ಅರಣ್ಯ ಸಮಿತಿ ಸಭೆ ನಡೆಸಿ, ಕಾಡಂಚಿನ ಜನರ ಸಮಸ್ಯೆ ಆಲಿಸಿಲ್ಲ. ಆದ್ದರಿಂದ ಜನಪ್ರತಿನಿಗಳು, ಅಧಿಕಾರಿಗಳು ಹಾಗೂ ಸಮುದಾಯದ ಪ್ರತಿನಿಗಳು ಒಗ್ಗೂಡಿ ಆದಿವಾಸಿಗಳಿಗೆ ಸಿಗಬೇಕಾದ ಹಕ್ಕು ಕೊಡಿಸಬೇಕು" ಎಂದರು.

"ಪಿಎಚ

ಫಾಸ್ಟ್ ನ್ಯೂಸ್

ಸ್ವಾತಂತ್ರ್ಯ ದಿನಾಚರಣೆ: ನಶಾಮುಕ್ತ ಅಭಿಯಾನದ ವಿವಿಧ ಕಾರ್ಯಕ್ರಮ ಆಯೋಜನೆಗೆ ಸೂಚನೆ

» ದಾವಣಗೆರೆ

ಕೇಂದ್ರ ಸರ್ಕಾರದಿಂದ 78 ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ನಶಾಮುಕ್ತ ಭಾರತ ಅಭಿಯಾನದ ಪ್ರಯುಕ್ತ ಜಿಲ್ಲೆಯ ಎಲ್ಲಾ ಶಾಲಾ, ಕಾಲೇಜುಗಳಲ್ಲಿ ಮಾದಕ ವಸ್ತುಗಳ ಕುರಿತು ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಆಗಸ್ಟ್ 12 ರಂದು ಬೆಳಗ್ಗೆ 9 ಗಂಟೆಗೆ ಎಲ್ಲಾ ಶಾಲಾ, ಕಾಲೇಜು, ಮಹಾವಿದ್ಯಾನಿಲಯ, ತಾಂತ್ರಿಕ ಶಿಕ್ಷಣ ಕಾಲೇಜು, ವೈದ್ಯಕೀಯ ಕಾಲೇಜು, ಐಟಿಐ, ಪಾಲಿಟೆಕ್ನಿಕ್, ಫ್ಯಾಷನ್ ಇನ್ಸ್ಟಿಟ್ಯೂಟ್, ಪ್ಯಾರಾಮೆಡಿಕಲ್ ಕಾಲೇಜುಗಳು ಸೇರಿದಂತೆ ಎಲ್ಲಾ ಸಾರ್ವಜನಿಕ ಸಂಸ್ಥೆಗಳಲ್ಲಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕರಿಸಬೇಕು. ಪ್ರತಿಜ್ಞೆ ಸ್ವೀಕರಿಸುವ ಸಂದರ್ಭದಲ್ಲಿ ಫೋಟೋ, ವೀಡಿಯೋ ಮಾಡಲು ಬ್ಯಾಕ್ ಡ್ರಾಪ್ ಅಳವಡಿಸಬೇಕು. ಶೈಕ್ಷಣಿಕ ಸಂಸ್ಥೆಗಳಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಮಾಡಿ ಮತ್ತು ವಿಚಾರಗೋಷ್ಠಿ, ರ್‍ಯಾಲಿ, ಮ್ಯಾರಾಥಾನ್, ಬೀದಿನಾಟಕಗಳ ಮೂಲಕ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಮತ್ತು ಶಾಲಾ, ಕಾಲೇಜಿನ ಆವರಣದಲ್ಲಿ ನಶಾಮುಕ್ತ ಭಾರತದ ಅಂಗವಾಗಿ ಸಸಿಗಳನ್ನು ನೆಡಬೇಕು.

ಆಗಸ್ಟ್ 12 ರಿಂದ 15 ರ ವರೆಗೆ ನಶಾಮುಕ್ತ ಭಾರತ ಅಭಿಯಾನದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ಫೋಟೋ, ವೀಡಿಯೋಗಳನ್ನು ನಶಾಮುಕ್ತ ಭಾರತ ಅಭಿಯಾನ ಆಪ್‌ನಲ್ಲಿ ಅಪ್‌ಲೋಡ್ ಮಾಡಲು ತಿಳಿಸಬೇಕೆಂದು ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿಗೆ ಪದವಿ ವಿದ್ಯಾರ್ಥಿಗಳಿಂದ ಅರ್ಜಿ

» ದಾವಣಗೆರೆ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಿಗೆ ಪ್ರಸಕ್ತ ವರ್ಷ ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ.4 ಕೊನೆಯ ದಿನವಾಗಿರುತ್ತದೆ. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಇಲಾಖೆಯ ವೆಬ್ ಸೈಟ್ https://bcwd.karnataka.gov.in ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ, ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 8050770004 ಮತ್ತು 8050770005 ಸಂಪರ್ಕಿಸಲು ಬಿಸಿಎಂ ಅಧಿಕಾರಿ ಗಾಯತ್ರಿ ತಿಳಿಸಿದ್ದಾರೆ.

ರಾಘವೇಂದ್ರಸ್ವಾಮಿ ಮಠದಲ್ಲಿ 353ನೇ ಆರಾಧನಾ ಮಹೋತ್ಸವ.

» ಚಳ್ಳಕೆರೆ

ವಾಲ್ಮೀಕಿನಗರದಲ್ಲಿರುವ ನಂಜನಗೂಡು ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ಶ್ರೀಗುರುರಾಘವೇಂದ್ರತೀರ್ಥಗುರು ಸಾರ್ವಭೌಮರ 353ನೇ ಆರಾಧನಾ ಮಹೋತ್ಸವನ್ನು ಆ.20ರಿಂದ22ರ ತನಕ ಭಕ್ತಿಶ್ರದ್ಧೆಯಿಂದ ನಡೆಸಲಾಗುವುದು ಎಂದು ಮಠದ ವ್ಯವಸ್ಥಾಪಕ ಶ್ರೀನಾಥಆಚಾರ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಪ್ರಸ್ತುತ ನಗರದ ಶ್ರೀಮಠದಲ್ಲಿ 3ನೇ ಆರಾಧನೆಯಾಗಿದ್ದು, ಕಳೆದ ಎರಡು ವರ್ಷಗಳ ಅವಧಿಯಲ್ಲೂ ಸಹ ಶ್ರೀರಾಘವೇಂದ್ರಸ್ವಾಮಿಗಳ ಆರಾಧನೆಗೆ ಹೆಚ್ಚಿನ ಜನಸಂಖ್ಯೆ ಕಂಡುಬಂದಿದ್ದು ಎಲ್ಲರೂ ರಾಯರ ಅನುಗ್ರಹಕ್ಕೆ ಪಾತ್ರರಾಗಿದ್ದಾರೆ. ಆರಾಧನೆ ಕುರಿತಂತೆ ಈಗಾಗಲೇ ಸಾಕಷ್ಟು ಮಾಹಿತಿಯನ್ನು ಭಕ್ತರಿಗೆ ನೀಡಲಾಗುತ್ತಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಆರಾಧನೆಯನ್ನು ಯಶಸ್ವಿಗೊಳಿಸಬೇಕೆಂದು ವಿನಂತಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ವಿಚಾರಣಾಕರ್ತ ಶ್ರೀನಾಥಭಟ್, ಶ್ರೀಗುರುರಾಘವೇಂದ್ರರ ಆರಾಧನೆಗೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಗುರುಗಳ ಕೃಪೆಗೆ ಪಾತ್ರರಾಗಬೇಕಲ್ಲದೆ, ಆರಾಧನೆಯನ್ನು ಯಶಸ್ವಿಗೊಳಿಸಲು ಕೈಜೋಡಿಸಬೇಕು. ಅ.19ರ ಸೋಮವಾರಬೆಳಗ್ಗೆ10ಕ್ಕೆಶ್ರೀಮಠದಲ್ಲಿಸಾಮೂಹಿಕ ಸತ್ಯನಾರಾಯಣಸ್ವಾಮಿ ಪೂಜೆವಿರುತ್ತದೆ. ಆ.20ರ ಮಂಗಳವಾರ ಪೂರ್ವಾರಾಧನೆ, ಆ.21 ಬುಧವಾರ ಮಧ್ಯಾರಾಧನೆ, ಆ.22ರ ಗುರುವಾರ ಉತ್ತಾರಾಧನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಹಾಮಾರಿ ಡೆಂಗ್ಯೂ ಜ್ವರ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಯಾವುದೇ ಪ್ರಕರಣ ಬಾರದಂತೆ ಮುಂಜಾಗ್ರತಾ ಕ್ರಮ

ಡೆಂಗ್ಯೂ ನಿಯಂತ್ರಣಕ್ಕಾಗಿ ವಾರದ ಒಣಗಲು ದಿನ

» ಹೊಸದುರ್ಗ

ಇತ್ತೀಚಿಗೆ ರಾಜ್ಯಾದ್ಯಂತ ಮಹಾಮಾರಿ ಡೆಂಗ್ಯೂ ಜ್ವರ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪುರಸಭೆ ವ್ಯಾಪ್ತಿಯಲ್ಲಿ ಯಾವುದೇ ಪ್ರಕರಣ ಬಾರದಂತೆ ಮುಂಜಾಗ್ರತಾ ಕ್ರಮವಾಗಿ ಆರೋಗ್ಯ ಇಲಾಖೆ, ಪುರಸಭೆ ಸಂಯೋಗದೊಂದಿಗೆ ಪಟ್ಟಣದ ಕೋಟೆ ಭಾಗದಲ್ಲಿ ಅತಿ ಹೆಚ್ಚು ಜನ ಸಾಂದ್ರತೆ ಇರುವ ಜಾಗದಲ್ಲಿ ವಾರದ ಒಣಗಲು ದಿನ ಆಚರಣೆಯನ್ನ ಶುಕ್ರವಾರ ಆಯೋಜಿಸಲಾಯಿತು.

ಈ ಸಂಧರ್ಬದಲ್ಲಿ ಡೆಂಗ್ಯೂ ಜ್ವರ ನಿಯಂತ್ರಣದ ಬಗ್ಗೆ ಬಿತ್ತಿ ಪತ್ರಗಳನ್ನು ಬಿಡುಗಡೆಮಾಡಿ ಮಾತನಾಡಿದ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು.ಜಿ.ವಿ ಪ್ರತಿ ಮನೆಯಲ್ಲಿ ನೀರು ಸಂಗ್ರಹಿಸುವ ತೊಟ್ಟಿಗಳನ್ನು ತೊಳೆದು ಒಣಗಿಸಿ ನಂತರ ನೀರನ್ನ ತುಂಬಿಸುವುದು ಹಾಗೂ ಸುತ್ತಮತ್ತ ತೆಂಗಿನ ಚಿಪ್ಪು, ಟೈರ್ ಮತ್ತು ಮಡಿಕೆ ಕುಡಿಕೆಗಳನ್ನು ತೆರವುಗೊಳಿಸುವುದರ ಮೂಲಕ ನೀರು ಸಂಗ್ರಹವಾಗದಂತೆ ನೋಡಿಕೊಳ್ಳಲು ತಿಳಿಸಿದ ಅವರು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸಗಳನ್ನು ಪುರಸಭೆ, ಆರೋಗ್ಯ

ಇಲಾಖೆ ಕಡ್ಡಾಯವಾಗಿ ಮಾಡುತ್ತಿದೆ ಎಂದರು.

ಆರೋಗ್ಯ ಇಲಾಖೆ ನಿರೀಕ್ಷಕ ಸಿದ್ದರಾಮಪ್ಪ ಮಾತನಾಡಿ ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಲವು ಸಭೆಗಳನ್ನು ಮಾಡಿ ಸುತ್ತೋಲೆಗಳನ್ನು ಹೊರಡಿಸಿದ್ದು ಪಟ್ಟಣ ವ್ಯಾಪ್ತಿಯಲ್ಲಿ ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ ಅರಿವು ಜಾಥಾ, ಕರ ಪತ್ರ ಹಂಚಿಕೆ, ಆಟೋ ಪ್ರಚಾರ, ಹೋರ್ಡಿಂಗ್ ಅಳವಡಿಕೆ ಇತರೆ ಕಾರ್ಯಕ್ರಮಗಳನ್ನು ಆಯೋಜಿಸುವುದರ ಜೊತೆಗೆ ಅಂಗನವಾಡಿ ಹಾಗೂ ಆ.ಶಾ ಕಾರ್ಯಕರ್ತರ ಮೂಲಕ 23 ವಾರ್ಡ್‌ಗಳಲ್ಲಿ ಲಾರ್ವಾ ಸಮೀಕ್ಷೆಯನ್ನು ಪುರಸಭೆ ಸಹಕಾರದೊಂದಿಗೆ ಮಾಡಲಾಗುತ್ತಿದ್ದು ಈವರೆಗೆ ಪಟ್ಟಣದಲ್ಲಿ ಯಾವುದೇ ಪ್ರಕರಣಗಳು ಇರುವುದು ಕಂಡು ಬಂದಿರುವುದಿಲ್ಲ ಎಂದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ರಾಮಚಂದ್ರಪ್ಪ, ಹೆಚ್. ರಾಮಚಂದ್ರ, ಶಂಕರಪ್ಪ ಹಾಗೂ ಆರೋಗ್ಯ ನಿರೀಕ್ಷಕರಾದ ಮಲ್ಲಿಕಾರ್ಜುನ, ಕಲ್ವನ.ಟಿ, ಪುರಸಭೆ ಸಿಬ್ಬಂದಿಗಳು, ಕಾರ್ಮಿಕರು, ಆ.ಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಜರಿದ್ದರು.

> ಹೊಸದುರ್ಗ ಪಟ್ಟಣದಲ್ಲಿ 23 ವಾರ್ಡುಗಳಿದ್ದು ಯಾವುದೇ ಕಾರಣಕ್ಕು ಪುರಸಭೆ ವ್ಯಾಪ್ತಿಯಲ್ಲಿ ಪ್ರಕರಣಗಳು ಬಾರದಂತೆ ಹಾಗೂ ಸಾವು ನೋವುಗಳು ಸಂಭವಿಸದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಸಾರ್ವಜನಿಕರು ನಿಮ್ಮ ಮನೆಯ ಒಳಗೆ ಹಾಗೂ ಮನೆಯ ಸುತ್ತ ಮುತ್ತ ಸೊಳ್ಳೆಗಳು ಉತ್ಪತ್ತಿಯಾಗದಂತೆ ನೋಡಿಕೊಳ್ಳಬೇಕು,ಸ್ವಯಂ ರಕ್ಷಣಾ ವಿಧಾನಗಳನ್ನು ಅನುಸರಿಸುವುದರಿಂದ ಸೊಳ್ಳೆ ಕಡಿತದಿಂದ ಪಾರಾಗಬಹುದು,ಮತ್ತು ಸೊಳ್ಳೆಗಳಿಂದ ಹರಡುವ ರೋಗಗಳನ್ನು ಸುಲಭವಾಗಿ ತಡೆಗಟ್ಟಬಹುದು.
> » ಜಿ.ಬಿ.ಗೋವಿಂದಪ್ಪ, ಶಾಸಕರು, ಹೊಸದುರ್ಗ

ವೀರಶೈವ ಮಹಿಳಾ ಸಹಕಾರ ಸಂಘ, ಹತ್ತು ಪಟ್ಟು ಹೆಚ್ಚಾದ ಬಂಡವಾಳ: ಅನಿತಾ ರಾಜೇಶ್

» ಹೊಸದುರ್ಗ

ಕಳೆದ ಐದು ವರ್ಷಗಳಿಂದೆ 3 ಲಕ್ಷ ಬಂಡವಾಳದೊಂದಿಗೆ ಆರಂಭವಾದ ವೀರಶೈವ ಮಹಿಳಾ ಸಹಕಾರ ಸಂಘವು ಪ್ರಸ್ತುತ 33 ಕೋಟಿ ಬಂಡವಾಳದೊಂದಿಗೆ ಮುನ್ನಡೆಯುತ್ತಿದೆ ಎಂದು ಸಂಘದ ಅಧ್ಯಕ್ಷೆ ಅನಿತಾ ರಾಜೇಶ್ ಸಂತಸ ವ್ಯಕ್ತಪಡಿಸಿದರು.

ಹೊಸದುರ್ಗ ತಾಲ್ಲೂಕು ವೀರಶೈವ ಮಹಿಳಾ ಸಹಕಾರ ಸಂಘದ ವತಿಯಿಂದ ಪಟ್ಟಣ ಗಣೇಶ ಸದನದಲ್ಲಿ ಗುರುವಾರ ಆಯೋಜಿಸಿದ್ದ ' ವಾರ್ಷಿಕ ಮಹಾಸಭೆ ' ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವೀರಶೈವ ಮಹಿಳಾ ಸಹಕಾರ ಸಂಘವೂ ಸಹ ಆರಂಭದಲ್ಲಿ ಕಲ್ಲು ಮುಳ್ಳಿನ ಹಾದಿಯಲ್ಲಿ ಸಾಗಿದೆ. ಪ್ರಸ್ತುತ ಒಂದು ನಿವೇಶನ ಖರೀದಿಸಿದ್ದು, ಬ್ಯಾಂಕ್ ನಿರ್ಮಾಣಕ್ಕೆ ಸಿದ್ಧತೆ ನಡೆಸಲಾಗುತ್ತಿದೆ ಎಂದರು.ವ್ಯವಸ್ಥಾಪಕರು, ಸಿಬ್ಬಂದಿಗಳು ಹಾಗೂ ಸದಸ್ಯರ ಸಹಕಾರದಿಂದ ಸಂಘದ ವ್ಯಾಪ್ತಿಯನ್ನು ಬೆಂಗಳೂರು, ಚಿಕ್ಕಮಗಳೂರು ಸೇರಿದಂತೆ ಹಲವು ಜಿಲ್ಲೆಗಳವರೆಗೂ ವಿಸ್ತರಿಸಲಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಸಾಲ ಪಡೆದವರು ಸಮಯಕ್ಕೆ ಸರಿಯಾಗಿ

ಮರುಪಾವತಿ ಮಾಡಬೇಕು. ಸಾಲಕ್ಕೆ ಜಾಮೀನು ನೀಡಿದವರು ಸಾಲಗಾರರಷ್ಟೇ ಹೊಣೆಗಾರರು. ಸದಸ್ಯರು ಷೇರು ಹಾಕುವುದರ ಜೊತೆಗೆ ವಹಿವಾಟು ಕೂಡಾ ನಡೆಸಬೇಕು. ಷೇರು ವಹಿವಾಟು ನಡೆಸದ ಸದಸ್ಯರ ಷೇರನ್ನು ಅಮಾನತುಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಉಪಾಧ್ಯಕ್ಷರಾದ ಡಾ.ಜಿ.ಬಿ. ಕೋಮಲಸ್ವಾಮಿ, ನಿರ್ದೇಶಕರುಗಳಾದ ಶುಭ ಮಂಜುನಾಥ್ ಟಿ.ಹೆಚ್, ಪುಷ್ಪಲತಾ ಕಾಂತ್ ರಾಜ್, ಅಂಬಿಕ ಜಯಪ್ಪ, ಸೌಭಾಗ್ಯ ರಮೇಶ್, ರೇಣುಕಾ ಪರಮೇಶ್, ಉಮಾಚನ್ನಬಸವಯ್ಯ, ಜ್ಯೋತಿ ಕೊಟ್ರೇಶ್, ಚಂದ್ರಕಲಾ ಜಯನಂದ್, ಲತಾ ರೇಣುಕಾ ಕುಮಾರ್, ಆಶಾ ಜಗದೀಶ್, ಪ್ರಮಿಳಾ ರವೀಂದ್ರ ನಾಯ್ಕ್, ಅಲ್ಮಾಸ್ ಫಾರುಕ್ ಸೇರಿದಂತೆ ಸಂಘದ ಸದಸ್ಯರಿದ್ದರು.

ಹೊಸದುರ್ಗದ ಜನತೆ ಸಂಸ್ಕಾರವಂತರು: ಗುರೂಜಿ

» ಹೊಸದುರ್ಗ

ಪಟ್ಟಣದಲ್ಲಿ ನಡೆಯುತ್ತಿರುವ ದೇವಾಲಯ ಪ್ರಾರಂಭೋತ್ಸವದಲ್ಲಿ ಹೆಚ್ಚು ಜನರು ಭಾಗವಹಿಸಿ, ಸಂಸ್ಕಾರಯುತ ಕಾರ್ಯಗಳನ್ನು ಮಾಡಿದರು. ಹೆಚ್ಚಾಗಿ ಯುವ ಜನತೆ ಈ ಕಾರ್ಯದಲ್ಲಿ ಭಾಗಿಯಾಗಿದ್ದಾರೆಂದು ಬೆಂಗಳೂರಿನ ಮಹರ್ಷಿ ಮಂದಿರ ನವರತ್ನ ಅಗ್ರಹಾರದ ಆನಂದ್ ಗುರೂಜಿ ಸಂತಸ ವ್ಯಕ್ತಪಡಿಸಿದರು.ಹೊಸದುರ್ಗದಲ್ಲಿ ನಿರ್ಮಿಸಿರುವ ನೂತನ ಶನೇಶ್ವರ ಸ್ವಾಮಿ ದೇವಾಲಯದ ಪ್ರಾರಂಭೋತ್ಸವದ ಧಾರ್ಮಿಕ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಪೋಷಕರು ಮಕ್ಕಳಿಗೆ ಧಾರ್ಮಿಕತೆ, ಆಧ್ಯಾತ್ಮಿಕತೆ, ಧರ್ಮ ಜಾಗೃತಿ ಬಗ್ಗೆ ಅರಿವು ಮೂಡಿಸಬೇಕು. ಸಮಸ್ಯೆಗಳಿಗೆ ಪರಿಹಾರ ಹುಡುಕುವುದೇ ಧರ್ಮ. ಮಕ್ಕಳು ಯಶಸ್ಸಿಗೆ ಪೋಷಕರು ಹೋಗಲು ರಾತ್ರಿ ಶ್ರಮಿಸುತ್ತಾರೆ. ಅದೇ ಕೆಲ ಮಕ್ಕಳು ಪೋಷಕರನ್ನೇ ದೂರ ಮಾಡಿಕೊಳ್ಳುತ್ತಿದ್ದಾರೆ. ತಂದೆ ತಾಯಿ ಕಷ್ಟ ಅರಿತು, ಅವರನ್ನು ಪ್ರೀತಿಯಿಂದ ಕಾಣಿ ಎಂದು ಕಿವಿಮಾತು ಹೇಳಿದರು.151 ಕುಂಭಮೇಳ, ವಿವಿಧ ಕಲಾತಂಡಗಳೊಂದಿಗೆ ಆನಂದ್ ಗುರೂಜಿ ಅವರಿಗೆ ಸ್ವಾಗತ ಕೋರಲಾಯಿತು. ಬಸವೇಶ್ವರ ವೃತ್ತದಿಂದ ಆರಂಭವಾದ ಮೆರವಣಿಗೆ ಶನೇಶ್ವರ ಸ್ವಾಮಿ ದೇವಾಲಯದವರೆಗೂ ಸಾಗಿತು. ಶನೇಶ್ವರ ಸ್ವಾಮಿ, ನವಗ್ರಹ, ಈಶ್ವರ, ಪಾರ್ವತಿ, ಗಣೇಶ ವಿಗ್ರಹಗಳ ಮೂರ್ತಿ ಪ್ರತಿಷ್ಠಾಪನೆ ನೇರವೇರಿತು. ನಂತರ ಹುಣಸಘಟ್ಟದ ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ ಕಳಸ ಪ್ರತಿಷ್ಠಾಪನೆ ನೇರವೇರಿಸಿದರು. ಎಡೆಯೂರಿನ ರೇಣುಕಾ ಶಿವಾಚಾರ್ಯ ಸ್ವಾಮೀಜಿ, ಹುಣಸಘಟ್ಟದ ಹಾಲುಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯ ಸ್ವಾಮೀಜಿ, ಬೆಲಗೂರಿನ ಮಾರುತಿ ಪೀಠದ ವಿಜಯ ಮಾರುತಿ ಶರ್ಮಾ ಸ್ವಾಮೀಜಿ, ತಾವರೆಕೆರೆ ಶಿಲಾಮಠದ ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ, ನಂದೀಪುರದ ಹಿರೇಮಠ ನಂದೀಶ್ವರ ಶಿವಾಚಾರ್ಯ ಸ್ವಾಮೀಜಿ, ಕೆ. ಬಿದರೆಯ ದೊಡ್ಡಮಠದ ಪ್ರಭುಕುಮಾರ ಶಿವಾಚಾರ್ಯ ಸ್ವಾಮೀಜಿ, ಹಣ್ಣೆಯ ಶ್ರೀಶೈಲ ಶಾಖಾಮಠದ ಅಭಿನವ ಮರುಳಸಿದ್ದ ಪಂಡಿತಾರಾಧ್ಯ ಸ್ವಾಮೀಜಿ, ಚಿತ್ರದುರ್ಗದ ಗೋವಿಂದ ಸ್ವಾಮೀಜಿ, ವಿಸ್ಮಯ ಟ್ರಸ್ಟ್ ಅಧ್ಯಕ್ಷ ಅನಂತ್ ಜೀ, ಗುರು ಶನೇಶ್ವರ ಸ್ವಾಮಿ ಭಕ್ತ ಮಂಡಳಿಯ ಅಧ್ಯಕ್ಷ ಸಿ. ಪ್ರಕಾಶ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಮಂಜುನಾಥ್, ನಾಯಿಗೆರೆ ಚಂದ್ರಶೇಖರ್, ಆಗ್ರೋ ಶಿವಣ್ಣ, ದೀಪಿಕಾ ಸತೀಶ್, ಹೆಬ್ಬಳ್ಳಿ ಮಲ್ಲಿಕಾರ್ಜುನ್ ಸೇರಿದಂತೆ ಟ್ರಸ್ಟ್ ನ ಸದಸ್ಯರು, ಗಣ್ಯರು ಹಾಗೂ ಸಾರ್ವಜನಿಕರಿದ್ದರು.

ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆ

ಬೆಳಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರಧ್ವಜಾರೋಹಣ

ದಾವಣಗೆರೆ: ಜಿಲ್ಲಾಡಳಿತ ವತಿಯಿಂದ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು ಜಿಲ್ಲಾ ಕ್ರೀಡಾಂಗಣದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜನ್ ಅವರು ಬೆಳಗ್ಗೆ 9 ಗಂಟೆಗೆ ರಾಷ್ಟ್ರಧ್ವಜಾರೋಹಣ ನೆರವೇರಿಸುವರು. ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಉಪಸ್ಥಿತರಿರುವರು. ಅಂದು ಸಂಜೆ 6 ಗಂಟೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಕುವೆಂಪು ಕನ್ನಡ ಭವನದಲ್ಲಿ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿ–ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

ಪ್ರಮುಖ ಸುದ್ದಿ

ದಾವಣಗೆರೆ 3 ಕೇಂದ್ರಗಳಲ

ಫಾಸ್ಟ್ ನ್ಯೂಸ್

ಐಎಎಸ್ ಪರೀಕ್ಷೆಯಲ್ಲಿ 101 ನೇ ರ್‍ಯಾಂಕ್ ಪಡೆದ ಸೌಭಾಗ್ಯ ಬೀಳಗಿ ಮಠಗೆ ಗ್ರಂಥಾಲಯದಲ್ಲಿ ಸನ್ಮಾನ

» ದಾವಣಗೆರೆ

ನಗರ ಕೇಂದ್ರ ಗ್ರಂಥಾಲಯದಿಂದ ದಾವಣಗೆರೆ ನಗರದ ಸ್ಟಿಲರ್ ಜ್ಯೂಬಿಲಿ ಶಾಖಾ ಗ್ರಂಥಾಲಯದಲ್ಲಿ ಆಗಸ್ಟ್ 9 ರಂದು ಐ.ಎ.ಎಸ್ ಪರೀಕ್ಷೆಯಲ್ಲಿ 101 ನೇ ರ್‍ಯಾಂಕ್ ಪಡೆದಿರುವ ದಾವಣಗೆರೆಯ ಸೌಭಾಗ್ಯ ಬೀಳಗಿ ಮಠ ಇವರನ್ನು ಸನ್ಮಾನಿಸಲಾಯಿತು. ಈ ವೇಳೆ ಮಾತನಾಡಿದ ಸೌಭಾಗ್ಯ ಬೀಳಗಿ ಮಠ ಲೋಕಸೇವಾ ಆಯೋಗದ ಪರೀಕ್ಷೆಗಳು ಸೇರಿದಂತೆ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ತೆಗೆದುಕೊಂಡಾಗ ಪರೀಕ್ಷೆಯ ಕುರಿತು ಸಮಯದ ಪರಿಪಾಲನೆ, ಓದಿನ ಶಿಸ್ತು, ವಿಷಯಗಳ ಗ್ರಹಿಕೆ, ವಿಷಯಗಳ ಪುನರ್‌ಮನನ ಸೇರಿದಂತೆ ದಿನನಿತ್ಯದ ಓದಿನ ಸಮಯವನ್ನು ಪೂರ್ವ ನಿಯೋಜಿತವಾಗಿ ಮೀಸಲಿಟ್ಟು ಅದರಂತೆ ಓದಬೇಕು ಎಂದು ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಂಡಿರುವ ಗ್ರಂಥಾಲಯಕ್ಕೆ ಆಗಮಿಸಿದ ಓದುಗರನ್ನು ಕುರಿತು ಮಾತನಾಡಿದರು. ಗ್ರಂಥಾಲಯದ ಉಪ ನಿರ್ದೇಶಕರಾದ ಪಿ.ಆರ್ ತಿಪ್ಪೇಸ್ವಾಮಿ, ಸೌಭಾಗ್ಯ ತಂದೆ ಶರಣಯ್ಯ ಬೀಳಗಿ ಮಠ, ಪತ್ರಕರ್ತರಾದ ಮಂಜುನಾಥ ಹೆಚ್.ಬಿ, ಗ್ರಂಥಾಲಯ ಸಿಬ್ಬಂದಿಗಳಾದ ಮಹಾಸ್ವಾಮಿ ಬಿ.ಇ, ಗೋಪಾಲ. ಕೆ, ಸಂಗಣ್ಣ ಬೆಳಗಲ್ಲ, ಮಂಜುನಾಥ ಎಸ್.ಬಗರಿ, ಪರಶುರಾಮಪ್ಪ ಎಂ.ಆರ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ರಾಷ್ಟ್ರೀಯ ಬಸವದಳದ ವತಿಯಿಂದ ಕಿವುಡ, ಮೂಗರ ಶಾಲೆಯಲ್ಲಿ ಬಸವಪಂಚಮಿ ಆಚರಣೆ

» ಚಳ್ಳಕೆರೆ

ರಾಷ್ಟ್ರೀಯ ಬಸವದಳ ಚಳ್ಳಕೆರೆ ಘಟಕದ ವತಿಯಿಂದ ಬಸವಪಂಚಮಿ ಅಂಗವಾಗಿ ವೆಂಕಟೇಶ್ವರ ನಗರದ ಬೆಳಕು ಕಿವುಡ, ಮೂಗರ ಶಾಲೆಯ ವಿದ್ಯಾರ್ಥಿಗಳಿಗೆ ಸಿಹಿ, ಹಣ್ಣು, ಹಾಲು ಹಂಚುವ ಮೂಲಕ ಬಸವಪಂಚಮಿಯನ್ನು ಸಂಭ್ರಮದಿಂದ ಆಚರಿಸಿದರು. ಚಳ್ಳಕೆರೆ ಘಟಕದ ಅಧ್ಯಕ್ಷ, ನಿವೃತ್ತ ಶಿಕ್ಷಕ ಗೋಕರ್ಣ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಬಸವಪಂಚಮಿಯನ್ನು ಆಚರಿಸಲಾಗುತ್ತಿದೆ. ಎಲ್ಲಾ ಜನಸಾಮಾನ್ಯರಲ್ಲೂ ಧಾರ್ಮಿಕ ವಿಚಾರ ಜಾಗೃತಿ ಮೂಡಿಸುವ ಕಾರ್ಯವನ್ನು ರಾಷ್ಟ್ರೀಯ ಬಸವದಳ ಮಾಡುತ್ತಾ ಬಂದಿದೆ. ಇತ್ತೀಚಿನ ದಿನಗಳಲ್ಲೂ ಸಹ ಗ್ರಾಮಾಂತರ ಪ್ರದೇಶಗಳಲ್ಲಿ ಧಾರ್ಮಿಕ ವಿಚಾರಧಾರೆಗಳ ಬಗ್ಗೆ ಜನರಲ್ಲಿ ನಿರ್ಲಕ್ಷ್ಯ ಎದ್ದುಕಾಣುತ್ತಿದ್ದು ಈ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯವನ್ನು ಬಸವದಳ ಮುಂದಿನ ದಿನಗಳಲ್ಲಿ ಮಾಡಲಿದೆ ಎಂದರು.

ಬೆಳಕು ಕಿವುಡ, ಮೂಗರ ಶಾಲೆಯ ಶಿಕ್ಷಕ ರಾಮಾಂಜನೇಯ ಮಾತನಾಡಿ, ಬಸವದಳ ಶಾಲೆಗೆ ಆಗಮಿಸಿ ವಿದ್ಯಾರ್ಥಿಗಳಿಗೆ ಸಿಹಿ ನೀಡುವುದಲ್ಲದೆ, ಹಲವಾರು ಮಹತ್ವದ ವಿಚಾರಗಳನ್ನು ತಿಳಿಸಿದೆ. ವಿದ್ಯಾರ್ಥಿಗಳುನಾಲ್ಕುಗೋಡೆಗಳಮಧ್ಯೆವಿದ್ಯಾಭ್ಯಾಸ ಮಾಡುವ ಸಂದರ್ಭದಲ್ಲಿ ಈ ಸಮಿತಿಯವರು ಆಗಮಿಸಿ ವಿದ್ಯಾರ್ಥಿಗಳಿಗೆ ಸಿಹಿ ನೀಡಿ, ಧಾರ್ಮಿಕ ವಿಚಾರಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಶಾಲೆಯ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು. ಶಿಕ್ಷಕಿ ಉಮಾ, ಪ್ರಕಾಶ್, ರಾಷ್ಟ್ರೀಯ ಬಸವದಳದ ಎಂ.ಹನುಮಂತಪ್ಪ, ಎಂ.ಎಸ್.ತಿಪ್ಪೇಸ್ವಾಮಿ, ಎಂ.ಎಸ್.ವೀಣಾ, ಎಂ.ಭಾಗ್ಯಮ್ಮ, ರವಿ, ತಿಪ್ಪಮ್ಮ, ಶಾಂತಮ್ಮ, ಲತಾ, ಸುಧಾ, ಪುಷ್ಪಲತಾ ಮುಂತಾದವರು ಉಪಸ್ಥಿತರಿದ್ದರು.

ಅಂಗನವಾಡಿ ಹುದ್ದೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಚನ್ನಗಿರಿ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 16 ಅಂಗನವಾಡಿ ಕಾರ್ಯಕರ್ತೆ ಮತ್ತು 52 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 9 ಕೊನೆಯ ದಿನ. ಅರ್ಜಿಯನ್ನು ವೆಬ್ ಸೈಟ್ http://karnemakaone.kar.nic.in/abcd/ ಮತ್ತು http://dwcd.karnataka.gov.in ಸಲ್ಲಿಸಬಹುದು

ಜಿಲ್ಲೆಯ ಪತ್ತಿನ ಮತ್ತು ನೌಕರರ ಪತ್ತಿನ ಸಹಕಾರ ಸಂಘಗಳ ವ್ಯವಸ್ಥಾಪಕರು ಹಾಗೂ ಸಿಬ್ಬಂದಿಗಳಿಗೆ ವಿಶೇಷ ತರಬೇತಿ

ಗ್ರಾಹಕರಿಗೆ ಉತ್ತಮ ಸೇವೆ: ನಮ್ಮ ಜವಾಬ್ದಾರಿ

» ಚಿತ್ರದುರ್ಗ

ಗ್ರಾಹಕರಿಗೆ ನೀಡುವ ಉತ್ತಮ ನೀಡುವುದು ನಮ್ಮ ಕರ್ತವ್ಯ ಹಾಗೂ ಜವಾಬ್ದಾರಿ ಎಂದು ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಹೆಚ್.ಎನ್.ತಿಪ್ಪೇಸ್ವಾಮಿ ಹೇಳಿದರು.

ನಗರದ ಕೆಳಗೋಟೆಯ ಸಹಕಾರಭವನದ ಸಭಾಂಗಣದಲ್ಲಿ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಚಿತ್ರದುರ್ಗ ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲೆಯಲ್ಲಿನ ಪತ್ತಿನ ಹಾಗೂ ನೌಕರರ ಪತ್ತಿನ ಸಹಕಾರ ಸಂಘಗಳ ವ್ಯವಸ್ಥಾಪಕರು ಮತ್ತು ಸಿಬ್ಬಂದಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರ ಸಂಘದ ಕಾರ್ಯದರ್ಶಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕಾದಲ್ಲಿ ಇಂತಹ ತರಬೇತಿಯಿಂದ ಮಾಹಿತಿ ಪಡೆದು ಇದರ ಸದುಪಯೋಗ ಪಡೆದುಕೊಳ್ಳಲು ತರಬೇತಿಯಲ್ಲಿ ಭಾಗವಹಿಸಿದ ಸಂಘಗಳ ವ್ಯವಸ್ಥಾಪಕರುಗಳಿಗೆ ತಿಳಿಸಿದರು.

ಸಹಕಾರಸಂಘಗಳಉಪನಿಬಂಧಕಆರ್. ಎಸ್.ದಿಲೀಪ್ ಕುಮಾರ್ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಚುನಾವಣೆಗೆ ಬಹಳ ಮಹತ್ವವಿದೆ. ಚುನಾವಣೆ ಸುಗುಮವಾಗಿ ನಡೆಯಲು ಸಹಕಾರ ಸಂಘಗಳ ಕಾರ್ಯನಿರ್ವಾಹಕರ ಜವಾಬ್ದಾರಿ ಬಹಳ ಮುಖ್ಯ. ಕಾನೂನು ಏನು ಹೇಳುತ್ತದೆ ಅದನ್ನು ಅರ್ಥಮಾಡಿಕೊಂಡು ಕೆಲಸ ಮಾಡಬೇಕು. ಚುನಾವಣೆ ಕುರಿತು ನೀಡುವ ಈ ದಿನದ ಉಪನ್ಯಾಸವನ್ನು ಸಂಘದ ಪ್ರತಿನಿಧಿಗಳು ಸದುಪಯೋಗಪ 'ಡೆದುಕೊಳ್ಳಬೇಕು ಎಂದು ತಿಳಿಸಿದರು.

ಸಹಕಾರ ಯೂನಿಯನ್ ಅಧ್ಯಕ್ಷ ಹೆಚ್.ಎಂ.ದ್ಯಾಮಣ್ಣ ಮಾತನಾಡಿ, ಬರುವ ಫೆಬ್ರವರಿ ಮತ್ತು ಮಾರ್ಚ್ ತಿಂಗಳುಗಳಲ್ಲಿ ಎಲ್ಲಾ ಪತ್ತಿನ ಸಹಕಾರ ಸಂಘಗಳ ಚುನಾವಣೆ ಬರುವುದರಿಂದ ಪ್ರಚಲಿತ ಕಾನೂನು ಯಾವ ರೀತಿ ಅಳವಡಿಸಿಕೊಳ್ಳಬೇಕು. ವಿಶೇಷವಾಗಿ ಪತ್ತಿನ ಸಹಕಾರ ಸಂಘಗಳಲ್ಲಿ ಗ್ರಾಹಕರು ಮಾಡುವ ಡಿಪಾಜಿಟ್ ಹಣವನ್ನು ಯಾವ ರೀತಿ ಸಂಘದಲ್ಲಿ ವಿನಿಯೋಗಿಸಬೇಕು. ಸಾಲ ಕೊಡುವಾಗ ಓ.ಡಿ. ಸಾಲ ಯಾವ ರೀತಿಕೊಡಬೇಕು, ಮಾರ್ಟ್‌ಗೇಜ್ ಸಾಲ ಯಾವ ರೀತಿಕೊಡಬೇಕು ಎಂಬ ಬಗ್ಗೆ ಈ ತರಬೇತಿಯಲ್ಲಿ ಹೇಳಲು ಬಂದಿರುವ ಉಪನ್ಯಾಸದಲ್ಲಿ ಮಾಹಿತಿ ಪಡೆದುಕೊಳ್ಳಿ ಎಂದು ತಿಳಿಸಿದರು.

ಸಂಘದ ಚುನಾವಣೆಗಳಲ್ಲಿ ಯಾರ ಒತ್ತಡಕ್ಕೆ ಯಾವ ರಾಜಕೀಯ ಶಿಫಾರಸ್ಸುಗಳಿಗೆ ಬಲಿಯಾಗದೆ ಕೆಲಸ ನಿರ್ವಹಿಸಬೇಕು. ಸರ್ಕಾರದಿಂದ ಚುನಾವಣೆ ಆಯೋಗ ಆದಾಗಿನಿಂದ ಸರ್ಕಾರ ಎಲ್ಲಾ ವರ್ಗದ ಜನರಿಗೆ ಮೀಸಲಾತಿ ಮಾಡಿದ್ದು, ಎಲ್ಲಾ ವರ್ಗದ ಜನರಿಗೆ ನ್ಯಾಯದೊರಕಲಿ ಎಂಬ ಚಿಂತನೆಯನ್ನು ಸರ್ಕಾರ ರೂಪಿಸಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಇದಕ್ಕೆ ಬಹಳ ಮಹತ್ವ ನೀಡಬೇಕು ಎಂದರು.

ಸಹಕಾರ ಸಂಘಗಳ ಸಹಾಯಕ ನಿಬಂಧಕ (ನಿವೃತ್ತ) ಚಿಕ್ಕಮಗಳೂರಿನ ಎಸ್.ವಿ.ಬಸವರಾಜ್ ಅವರು, ಸಹಕಾರ ಸಂಘಗಳ ಇತ್ತೀಚಿನ ತಿದ್ದುಪಡಿಯಾದ ಕಾಯ್ದೆ, ಕಾನೂನು ಮುಖ್ಯಾಂಶಗಳು ಹಾಗೂ ಸಹಕಾರ ಸಂಘಗಳ ಚುನಾವಣೆ ಜರುಗಿಸುವ ವಿಧಿ ವಿಧಾನಗಳ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ನಾಗರಾಜ್ ಪಾಟೀಲ್ ಇದ್ದರು.

ಡೆಂಗ್ಯು ವಿರುದ್ಧ ಮುನ್ನೆಚ್ಚರಿಕಾ ಹಾಗೂ ಕ್ರಮ ಬಗ್ಗೆ, ಸ್ವಚ್ಛ ಪರಿಸರ, ಸ್ವಯಂ ಶಿಸ್ತಿನ ಬಗ್ಗೆ ಜಾಗೃತಿ

» ಚಿತ್ರದುರ್ಗ

ಆರೋಗ್ಯವಂತ ಮಹಿಳೆಯರು ಆತ್ಮಬಲ ಹೆಚ್ಚಿಸಿಕೊಂಡು,ಸ್ವಾವಲಂಬನೆ.ಆರ್ಥಿಕ ಸದೃಢತೆಯ ಮೂಲಕ ಸಾಮಾಜಿಕ ಸ್ವಾಸ್ಥ್ಯ ಕಾಯ್ದುಕೊಳ್ಳಲು ಶ್ರಮಿಸಬೇಕಿದೆ ಎಂದು ಸತ್ವಮಹಿಳಾ ಸಂಸ್ಥೆಯ ಅಧ್ಯಕ್ಷರಾದ ಶಶಿಕಲಾ ರವಿಶಂಕರ್ ತಿಳಿಸಿದರು.

ಹಿರಿಯೂರು ತಾಲ್ಲೂಕಿನ ಮಾಯಸಂದ್ರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಡೆಂಗ್ಯು ವಿರುದ್ಧ ಮುನ್ನೆಚ್ಚರಿಕಾ ಹಾಗೂ ಕ್ರಮಗಳ ಬಗ್ಗೆ, ಸ್ವಚ್ಛ ಪರಿಸರ.. ಸ್ವಯಂ ಶಿಸ್ತಿನ ಬಗ್ಗೆ ಜಾಗೃತಿ ಮೂಡಿಸುವ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಅವರು ಮಾತನಾಡುತ್ತಿದ್ದರು..

ಮಹಿಳೆಯರು ಹಾಗೂ ಮಕ್ಕಳ ಅಭ್ಯುದಯಕ್ಕೆ ಒತ್ತಾಸೆಯಾಗಿ ನಿಂತಿರುವ ಒಂದು ಸಮಾನ ಮನಸ್ಕ ಮಹಿಳೆಯರ ಗುಂಪು..ಇಲ್ಲಿ ನಮ್ಮೆಲ್ಲರದೂ ಒಮ್ಮತ ಯಾವುದೇ ವಿಷಯದಲ್ಲಿ....ನೊಂದ ಮಹಿಳೆಯರಿಗೆ ದನಿಯಾಗುವ.. ಬೆಳೆಯುವ ಮಕ್ಕಳ ಕನಸಿಗೆ..ಪ್ರತಿಭೆಗೆ ಪ್ರೋತ್ಸಾಹದ ನೀರೆರೆದು ಪೋಷಿಸಲು ಸಂಘಟಿತರು ನಾವು. ಸಮಾಜದಲ್ಲಿ ನೊಂದವರಿಗೆ ಚೇತೋಹಾರಿಯಾಗಬಲ್ಲ ಸತ್ವದಂತಹ ಸೇವಾ ಸಂಸ್ಥೆಗಳ ಅವಶ್ಯಕತೆ ಬಹಳ ಇದೆ. ಆರೋಗ್ಯವಂತ ಮಹಿಳೆಯರು ಆತ್ಮಬಲ ಹೆಚ್ಚಿಸಿಕೊಂಡು .. ಸ್ವಾವಲಂಬನೆ... ಆರ್ಥಿಕ ಸದೃಢತೆಯ ಮೂಲಕ ಸಾಮಾಜಿಕ ಸ್ವಾಸ್ಥ್ಯ ಕಾಯ್ದುಕೊಳ್ಳಲು ಶ್ರಮಿಸಬೇಕಿದೆ. ಮಕ್ಕಳ ಬಾಲ್ಯ ಸ್ವರ್ಗ ಸದೃಶವಾದದ್ದು... ಮತ್ತಷ್ಟು ವಿಪುಲಗೊಳಿಸಲು ನಾವು ಸನ್ನದ್ಧರಾಗಬೇಕಿದೆ. ಎಂದರು

ಈ ಕಾರ್ಯಕ್ರಮದ ಯೋಜನಾ ನಿರ್ದೇಶಕರು ಹಾಗೂ ಉಪಾಧ್ಯಕ್ಷರಾದ ಯಮುನಾ ಉಮಾಕಾಂತರವರು ಶಾಲಾ ಕಲಿಕೆಯಲ್ಲಿ ಶಿಕ್ಷಕರೊಂದಿಗೆ ಪೋಷಕರೂ ಕೈಜೋಡಿಸಿದಾಗ ಮಕ್ಕಳ ಕಲಿಕೆ ಪ್ರಗತಿ ಸಾಧಿಸುವುದು ಎಂದರು..

ಪ್ರಧಾನ ಕಾರ್ಯದರ್ಶಿ ಸರ್ವಮಂಗಳಾ ರಮೇಶ್.. ನಿರ್ದೇಶಕರಾದ ಶ್ರೀಕರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಸುಪ್ರೀತಾರವರು ಡೆಂಗ್ಯು ಖಾಯಿಲೆ ಹಾಗೂ ಖಾಯಿಲೆಯ ವಿರುದ್ಧ ಮುನ್ನೆಚ್ಚರಿಕಾ ಕ್ರಮಗಳು ಬಗ್ಗೆ ಸಾದ್ಯಂತವಾಗಿ ಮಾಹಿತಿ ನೀಡಿದರು..

ಉತ್ತಮ ಪರಿಸರಕ್ಕಾಗಿ ಮಕ್ಕಳೊಂದಿಗೆ ಗಿಡ ನೆಡುವುದರ ಜೊತೆಗೆ ಶಾಲಾ ಮಕ್ಕಳಿಗಾಗಿ ಸತ್ವ ಸಂಸ್ಥೆಯಿಂದ ಕೇರಂ ಬೋರ್ಡ್. ಆಟದ ಪರಿಕರಗಳನ್ನು ಉಡುಗೊರೆಯಾಗಿ ನೀಡಲಾಯಿತು.

ಮುಖ್ಯೋಪಾಧ್ಯಾಯಿನಿ ಉಷಾರಾಣಿಯವರು ಸ್ವಾಗತಿಸಿದರು..ಸತ್ವದ ಖಜಾಂಜಿ ತ್ರಿವೇಣಿ ಸತೀಶ್.. ನಿರ್ದೇಶಕರಾದ ಗೀತಾ ಹಿಮಾಚಲೇಶ್..ಲತಾ ಶಿವಪ್ರಸಾದ್.. ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷರೂ.. ಸದಸ್ಯರೂ ..

ಅಂಗನವಾಡಿ ಕಾರ್ಯಕರ್ತೆಯರೂ ಉಪಸ್ಥಿತರಿದ್ದರು..ಸಹಶಿಕ್ಷಕರಾದ ಶೈಲಜಾರವರು ನಿರೂಪಿಸಿ ವಂದಿಸಿದರು

ಶೇರುದಾರರ ಹಿತವನ್ನು ರಕ್ಷಿಸುವಲ್ಲಿ ಬ್ಯಾಂಕ್ ದಿಟ್ಟ ಹೆಜ್ಜೆ

» ಚಳ್ಳಕೆರೆ

ನಗರದ ಚಳ್ಳಕೆರೆ ಟೌನ್ ಬಳಕೆದಾರರ ಪತ್ತಿನ ಸಹಕಾರ ಸಂಘದ 80ನೇ ವರ್ಷದ ಸರ್ವಸದಸ್ಯರ ಮಹಾಸಭೆ ಸಂಘದ ಅಧ್ಯಕ್ಷ ಬಿ.ವಿ.ಶ್ರೀನಿವಾಸರಾಜು ಅಧ್ಯಕ್ಷತೆಯಲ್ಲಿ ಬ್ಯಾಂಕ್ ಆವರಣದಲ್ಲಿ ನಡೆಯಿತು. ಸಹಕಾರ ಕ್ಷೇತ್ರದಲ್ಲಿ ತನ್ನದೇಯಾದ ವಿಶೇಷತೆಯನ್ನು ಹೊಂದಿರುವ ಚಳ್ಳಕೆರೆ ಟೌನ್ ಬಳಕೆದಾರರ ಸಂಘ 1942ರಲ್ಲಿ ಆರಂಭವಾಗಿದ್ದು, ಎಲ್ಲಾ ವರ್ಗದ ಜನರಿಗೆ ಆರ್ಥಿಕ ನೆರವು ನೀಡುತ್ತಾ ಬಂದಿದೆ. ವಿಶೇಷವಾಗಿ ಸಣ್ಣಪುಟ್ಟ ವ್ಯಾಪಾರಿಗಳು, ಕೃಷಿ, ಕಾರ್ಮಿಕರು, ಬೀದಿಬದಿ ವ್ಯಾಪಾರಿಗಳು ಹಾಗೂ ಹಲವಾರು ವರ್ಗದ ಜನರಿಗೆ ಆರ್ಥಿಕ ನೆರವು ನೀಡುತ್ತಾ ಬಂದಿದೆ. ಪ್ರಸ್ತುತ 2023–24ನೇ ವರ್ಷದಲ್ಲಿ ಸುಮಾರು 6 ಲಕ್ಷ ಲಾಭವನ್ನು ಗಳಿಸಿದೆ. ಬ್ಯಾಂಕ್ ಸರ್ವತೋಮುಖ ಅಭಿವೃದ್ಧಿಗೆ ಬ್ಯಾಂಕ್ ಆಡಳಿತ ಮಂಡಳಿಯ ಎಲ್ಲಾ ನಿರ್ದೇಶಕರು, ಸಿಬ್ಬಂದಿ ವರ್ಗ ಹಾಗೂ ಶೇರುದಾರರ ಮುಕ್ತ ಸಹಕಾರ ಕಾರಣವಾಗಿದ್ದು, ಎಲ್ಲರನ್ನೂ ಅಭಿನಂದಿಸುವುದಾಗಿ ತಿಳಿಸಿದರು.

ಹಿರಿಯ ಸಹಕಾರಿ ದುರೀಣ ಸಿ.ಬಿ.ಆದಿಭಾಸ್ಕರಶೆಟ್ಟಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸಹಕಾರಿ ಕ್ಷೇತ್ರದಲ್ಲೂ ಸಹ ಅಮೂಲಾಗ್ರ ಬದಲಾವಣೆಯನ್ನು ಕೇಂದ್ರ ಸರ್ಕಾರದ ಮಾರ್ಗದರ್ಶನದಲ್ಲಿ ತರಲಾಗುತ್ತಿದೆ. ಸಹಕಾರಿ ಕ್ಷೇತ್ರವನ್ನು ಬಲಪಡಿಸುವ ನಿಟ್ಟಿನಲ್ಲಿ ನಿಯಮಗಳನ್ನು ತಿದ್ದುಪಡಿ ಮಾಡಲಾಗಿದೆ. ಪ್ರಸ್ತುತ ಚಳ್ಳಕೆರೆ ಟೌನ್ ಬಳಕೆದಾರರ ಸಂಘವೂ ಸಹ ಶೇರುದಾರರ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ ಹಲವಾರು ಯೋಜನೆಗಳನ್ನು ರೂಪಿಸಿದೆ ಎಂದರು.

ಸಂಘದ ಹಿರಿಯ ನಿರ್ದೇಶಕ, ಮಾಜಿ ಅಧ್ಯಕ್ಷ ಎಂ.ಸಂಜೀವಪ್ಪ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸಹಕಾರಿ ಕ್ಷೇತ್ರದಲ್ಲಿ ಲಾಭಗಳಿಸುವುದು ಕಷ್ಟದ ಕೆಲಸ ಆದರೆ ನಮ್ಮ ಈ ಬ್ಯಾಂಕ್ ಸುಮಾರು 40 ಲಕ್ಷ ಠೇವಣಿ ಇಟ್ಟಿದ್ದು ಸುಮಾರು 60 ಲಕ್ಷ ಸಾಲವನ್ನು ನೀಡಲಾಗಿದೆ.

ಪ್ರಮುಖ ಸುದ್ದಿ

ಸ್ವಾಂತಂತ್ರ್ಯ ದಿನಾಚರಣೆ, ರಾಷ್ಟ್ರಧ್ವಜ ಸಂಹಿತೆ ಮತ್ತು ಶಿಷ್ಟಾಚಾರ ಪಾಲನೆಗೆ ಸೂಚನೆ, ಪ್ಲಾಸ್ಟಿಕ್ ಧ್ವಜ ನಿಷಿದ್ಧ

» ದಾವಣಗೆರೆ

ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಎಲ್ಲಾ ಸರ್ಕಾರಿ ಕಚೇರಿ, ಗ್ರಾಮ ಪಂಚಾಯಿತಿ ಹಾಗೂ ಶಾಲಾ, ಕಾಲೇಜುಗಳಲ್ಲಿ ಕಡ್ಡಾಯವಾಗಿ ಆಚರಿಸಬೇಕು, ಆಚರಣೆ ಮಾಡುವಾಗ ರಾಷ್ಟ್ರಧ್ವಜ ಸಂಹಿತೆ ಪಾಲನೆ ಮಾಡಬೇಕೆಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

ರಾಷ್ಟ್ರಧ್ವಜಾರೋಹಣ ಮಾಡುವಾಗ ರಾಷ್ಟ್ರಧ್ವಜಕ್ಕೆ ಯಾವುದೇ ರೀತಿ ಅಗೌರವ ಉಂಟಾಗಬಾರದು, ನಿಯಮಬದ್ದವಾಗಿ ಆಚರಣೆ ಮಾಡಬೇಕು. ಸರ್ಕಾರದ ನಿರ್ದೇಶನದಂತೆ ಮಹಾತ್ಮ ಗಾಂಧೀಜಿಯವರ ಫೋಟೋ ಜೊತೆಗೆ ಡಾ: ಬಿ.ಆರ್.ಅಂಬೇಡ್ಕರ್ ರವರ ಫೋಟೋವನ್ನು ಬಳಕೆ ಮಾಡಬೇಕು. ಮತ್ತು ಶಾಲಾ, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ರಾಷ್ಟ್ರಧ್ವಜ ಬಳಕೆ ಮಾಡುವಾಗ ಕೇಸರಿ, ಬಿಳಿ, ಹಸಿರು ಕ್ರಮವಾಗಿರುವಂತೆ ನೋಡಿಕೊಳ್ಳಬೇಕು. ಮತ್ತು ಕಾರ್ಯಕ್ರಮ ಮುಗಿದ ನಂತರ ರಾಷ್ಟ್ರಧ್ವಜವನು ಎಲ್ಲೆಂದರಲ್ಲಿ ಹಾಕಬಾರದು, ಕೆಲವರು ಬೈಕ್‌ನಲ್ಲಿ ಕಟ್ಟುವಾಗ ಕೆಳಗೆ ಕಟ್ಟುವರು, ಕೆಲವರು ಸೈಕಲ್‌ನಲ್ಲಿ ಅಳವಡಿಸಿಕೊಂಡು ಹೋಗುವಾಗ ಸೊಂಟದಲ್ಲಿ ಧ್ವಜವನ್ನು ಇಟ್ಟುಕೊಳ್ಳುವರು. ಈಗಾಗದಂತೆ ನೋಡಿಕೊಳ್ಳಬೇಕು.

ಪ್ಲಾಸ್ಟಿಕ್ ಧ್ವಜ ನಿಷಿದ್ಧ; ಆಗಸ್ಟ್ 15 ರಂದು ಆಚರಿಸಲಿರುವ ಸ್ವಾತಂತ್ರ್ಯೋತ್ಸವ ದಿನಾಚರಣೆಯಲ್ಲಿ ಪ್ಲಾಸ್ಟಿಕ್ ರಾಷ್ಟ್ರಧ್ವಜ ಮಾರಾಟ ಮತ್ತು ಬಳಕೆ ನಿಷಿದ್ಧವಾಗಿದೆ. ರಾಷ್ಟ್ರಧ್ವಜವನ್ನು ಕೈಯಿಂದ ನೂಲುವ ಮತ್ತು ಕೈಯಿಂದ ನೇಯ್ದ ಅಥವಾ ಯಂತ್ರದಿಂದ ಮಾಡಿರುವ ಹಾಗೂ ಹತ್ತಿ ಪಾಲಿಸ್ಟಾರ್, ಉಣ್ಣೆ, ರೇಷ್ಮೆ ಖಾದಿಯಿಂದ ಮಾಡಿರುವ ಧ್ವಜಗಳನ್ನು ಬಳಸಬಹುದು. ಪ್ಲಾಸ್ಟಿಕ್ ಧ್ವಜ ಮಾರಾಟ ಮಾಡುವಂತಹ ಅಂಗಡಿ ಮಾಲೀಕರುಗಳ ವಿರುದ್ಧ ಪ್ಲಾಸ್ಟಿಕ್ ಹಾಗೂ ಪರಿಸರ ಸಂರಕ್ಷಣಾ ಕಾಯ್ದೆಯಡಿಯಲ್